ಶ್ರೀ

ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 16 RNI Number : KNKAN/25/A2770 18-01-2026 Sunday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :16 ರಾಯಚೂರು 18-01-2026 ರವಿವಾರ ಪುಟ 04 ಬೆಲೆ ರೂ.2/- ಮೊ:8660146563

ಬಳ್ಳಾರಿ ಗಲಭೆ : ಸಿಬಿಐ ತನಿಖೆಗೆ ಆಗ್ರಹಿಸಿ ಕಾಂಗ್ರೆಸ್ ವಿರುದ್ಧ ರಣಕಹಳೆ ಮೊಳಗಿಸಿದ ಬಿಜೆಪಿ

ಬಳ್ಳಾರಿ,ಜ.17-

ನಗರದಲ್ಲಿ ಇತ್ತೀಚಿಗೆ ನಡೆದ ಬ್ಯಾನರ್ ಗಲಭೆ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸುವುದು ಹಾಗೂ ಶಾಸಕ ನಾರಾ ಭರತ್ ರೆಡ್ಡಿ ಮತ್ತವರ ಬೆಂಬಲಿಗರನ್ನು ಬಂಧಿಸಬೇಕೆಂದು ಒತ್ತಾಯಿಸಿ ಕಾಂಗ್ರೆಸ್ ವಿರುದ್ಧ ಬಿಜೆಪಿ ರಣಕಹಳೆ ಮೊಳಗಿಸಿದೆ.

ಇಲ್ಲಿನ ಎಪಿಎಂಸಿ ಮೈದಾನದಲ್ಲಿ ನಡೆದ ಬಿಜೆಪಿ ಪ್ರತಿಭಟನೆ ಮತ್ತು ಸಮಾವೇಶದಲ್ಲಿ ಬಳ್ಳಾರಿ ಹಾಗೂ ವಿಜಯನಗರ ಸೇರಿದಂತೆ ಮತ್ತಿತರ ಭಾಗಗಳಿಂದ ದೊಡ್ಡ ಸಂಖ್ಯೆಯಲ್ಲಿ ಆಗಮಿಸಿದ್ದ ಕಾರ್ಯಕರ್ತರು ಕಾಂಗ್ರೆಸ್ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿ ಆಕ್ರೋಶ ಹೊರಹಾಕಿದರು.

ಸಮಾವೇಶದಲ್ಲಿ ಮಾತನಾಡಿದ ಬಿಜೆಪಿಯ ನಾಯಕರು, ಕಾಂಗ್ರೆಸ್ ಹಾಗೂ ಶಾಸಕ ನಾರಾ ಭರತ್ ರೆಡ್ಡಿ ವಿರುದ್ಧ ಅಕ್ಷರಶಃ ಬೆಂಕಿ ಉಗುಳಿದರು. ಘಟನೆ ನಡೆದು 15 ದಿನಗಳು ಆದರೂ ಈವರೆಗೂ ಶಾಸಕ ನಾರಾಭರತ್ ರೆಡ್ಡಿ ಅವರ ಆಪ್ತ ಸತೀಶ್ ರೆಡ್ಡಿ ಮತ್ತು ಬೆಂಬಲಿಗರನ್ನು ಏಕೆ ಬಂಧಿಸಿಲ್ಲ?

ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲ ಎಂದು ವಾಗ್ದಾಳಿ ನಡೆಸಿದರು.

ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲ ಇದನ್ನು ಮುಚ್ಚಿ ಹಾಕುವ ದುರುದ್ದೇಶದಿಂದಲೇ ಸಿಐಡಿಗೆ ವಹಿಸಲಾಗಿದೆ. ಇದು ಸರಕಾರದ



ಮೂಗಿನಡಿ ತನಿಖೆ ನಡೆಯುತ್ತಿರುವುದರಿಂದ ನಿಷ್ಪಕ್ಷಪಾತ ತನಿಖೆ ನಡೆಯಲು ಸಾಧ್ಯವೇ ಇಲ್ಲ ಎಂದು ಅನುಮಾನ ವ್ಯಕ್ತಪಡಿಸಿದರು.

ಅಂದು ಬೆಂಗಳೂರಿನಿಂದ ಬಳ್ಳಾರಿವರೆಗೆ ಪಾದಯಾತ್ರೆ ನಡೆಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಳ್ಳಾರಿಯನ್ನು ರಿಪಬ್ಲಿಕ್ ಆಫ್ ಬಳ್ಳಾರಿಯಿಂದ ಮುಕ್ತಗೊಳಿಸಿದ್ದೇವೆ ಎಂದು ಡಂಗುರ ಹೊಡೆಯುತ್ತಿದ್ದಾರೆ. ಈಗ ಇಲ್ಲಿ ನಡೆಯುತ್ತಿರುವುದಾದರೂ ಏನು? ಎಂದು ಪ್ರಶ್ನೆ ಮಾಡಿದರು.

ಶಾಸಕ ನಾರಾಭರತ್ ರೆಡ್ಡಿ ರಕ್ಷಣೆ ಮಾಡುವುದಕ್ಕಾಗಿಯೇ ಸರ್ಕಾರ ಅವರನ್ನು ಬಂಧಿಸುತ್ತಿಲ್ಲ. ಬಂಧಿಸಿದರೆ ಕಾಂಗ್ರೆಸ್ ಸರ್ಕಾರದ ಮರ್ಯಾದೆ ಹಾಳಾಗುತ್ತದೆ ಎಂದು ಸಿಐಡಿಗೆ ವಹಿಸಿ ತಿಪ್ಪೇ ಸಾರಿಸುವ ಕೆಲಸ ಮಾಡುತ್ತಿದೆ. ನಮಗೆ ನ್ಯಾಯ ಸಿಗುವವರೆಗೂ ಹೋರಾಟ ನಿಲ್ಲಿಸುವುದಿಲ್ಲ ಎಂದು ಶಪಥ ಮಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಕಾನೂನು ಮತ್ತು ಸಂಪೂರ್ಣವಾಗಿ ಕುಸಿದು ಬಿದ್ದಿದೆ. ಹುಬ್ಬಳ್ಳಿಯಲ್ಲಿ ಮಹಿಳೆಯ ಮೇಲೆ ಪೊಲೀಸರು ಹಲ್ಲೆ ನಡೆಸಿ ವಿವಸ್ತ್ರಗೊಳಿಸಿದ್ದಾರೆ, ಅಂಕೋಲದಲ್ಲಿ ದಲಿತ ಮಹಿಳೆಯನ್ನು ಮದುವೆಯಾಗಿದ್ದಕ್ಕೆ ಹಾಡುಹಗಲೇ ಕಗ್ಗೊಲೆಯಾಗಿದೆ. ನಮ ಪಕ್ಷದ ಶಾಸಕಿಯ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ಅಶ್ಲೀಲವಾಗಿ ಕಾಮೆಂಟ್ ಮಾಡುತ್ತಾರೆ, ಸರ್ಕಾರ ಸೌಜನ್ಯಕ್ಕಾದರೂ ಅವರನ್ನು ಬಂಧಿಸಿಲ್ಲ ಎಂದು ಕಿಡಿಕಾರಿದರು.

ಪೊಲೀಸ್ ಠಾಣೆಗಳು ಇಂದು ಕಾಂಗ್ರೆಸ್ ಭವನಗಳಾಗಿ ಪರಿವರ್ತನೆಯಾಗಿವೆ ಹಿಂದುಗಳ ಮೇಲೆ ನಿರಂತರವಾಗಿ ದೌರ್ಜನ್ಯ ನಡೆಯುತ್ತಿದ್ದರೂ ಮತ ಬ್ಯಾಂಕ್ ಕೈ ಕೊಡಬಹುದೆಂಬ ಭೀತಿಯಿಂದ ಕ್ರಿಮಿನಲ್‌ಗಳನ್ನು ರಕ್ಷಣೆ ಮಾಡುವ ಕೆಲಸ ಮಾಡುತ್ತಿದೆ. ಮುಂದಿನ ಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸಬೇಕು ಎಂದು ಕರೆಕೊಟ್ಟರು.

ಬಳ್ಳಾರಿ ಇಂದು ರಿಪಬ್ಲಿಕ್ ಆಫ್ ಕಾಂಗ್ರೆಸ್ ಆಗಿದೆ. ನಮ್ಮಲ್ಲಿನ ಕೆಲವು ಸಣ್ಣಪುಟ್ಟ ಭಿನ್ನಾಭಿಪ್ರಾಯಗಳಿಂದ ಅವರಲ್ಲಿ ಕೆಲವರು ಆಕಸಿಕವಾಗಿ ಶಾಸಕರಾಗಿದ್ದಾರೆ. ಆದರೆ ಅವರು ಹೋಗುತ್ತಿರುವ ದಾರಿ ನಡೆದುಕೊಳ್ಳುವ ರೀತಿನೀತಿಗಳು ಜನವಿರೋಧಿಯಾಗಿವೆ. ಇಂಥ ಶಾಸಕನನ್ನು ಮೊದಲು ಮನೆಗೆ ಕಳಿಸಿ ಎಂದು ಮುಖ್ಯಮಂತ್ರಿಯನ್ನು ಒತ್ತಾಯಿಸಿದರು.

ಸಿದ್ದರಾಮಯ್ಯನವರು ಕುರ್ಚಿಯಿಂದ ಇಳಿಯುವ ಮೊದಲು ನ್ಯಾಯಯುತ ತನಿಖೆ ನಡೆಸಿ ನಾರಾ ಭರತ ರೆಡ್ಡಿಯನ್ನು ತಕ್ಷಣ ಬಂಧಿಸಬೇಕು. ಆಗ ಮಾತ್ರ ನೀವು ಉತ್ತಮ ಮುಖ್ಯಮಂತ್ರಿಯಾಗಿ ನೆನಪಿಸಿಕೊಳ್ಳುತ್ತೀರಿ. ಇಲ್ಲದಿದ್ದರೆ, ನೀವು ಕಪ್ಪು ಚುಕ್ಕೆಯೊಂದಿಗೆ ಮನೆಗೆ ಹೋಗುತ್ತೀರಿ ಎಂದು ಬಿಜೆಪಿ ನಾಯಕರು ಎಚ್ಚರಿಸಿದರು.

ಕುರ್ಚಿಯಿಂದ ಇಳಿಯುವ ಮೊದಲು, ಕಪ್ಪು ಚುಕ್ಕೆ ಬಿಡದೆ, ನ್ಯಾಯಯುತ ತನಿಖೆ ನಡೆಸಿ ನರ ಭರತ ರೆಡ್ಡಿಯನ್ನು ತಕ್ಷಣ ಬಂಧಿಸಿ. ಆಗ ಮಾತ್ರ ನೀವು ಉತ್ತಮ ಮುಖ್ಯಮಂತ್ರಿಯಾಗಿ ನೆನಪಿಸಿಕೊಳ್ಳುತ್ತೀರಿ. ಇಲ್ಲದಿದ್ದರೆ ನೀವು ಕಪ್ಪು ಚುಕ್ಕೆಯೊಂದಿಗೆ ಮನೆಗೆ ಹೋಗುತ್ತೀರಿ ಎಂದು ಬಿಜೆಪಿ ನಾಯಕರು ಎಚ್ಚರಿಸಿದರು.

ಕಾಂಗ್ರೆಸ್ ತನ್ನನ್ನು ತಾನು ರಕ್ಷಿಸಿಕೊಳ್ಳಲು ಉದ್ದೇಶಪೂರ್ವಕವಾಗಿ ಸತ್ಯಗಳನ್ನು ತಿರುಚುತ್ತಿದೆ. ನಾರಾ ಭರತ್ ರೆಡ್ಡಿಗೆ ಸಂಬಂಧಿಸಿದ ಖಾಸಗಿ ಗನ್‌ಮ್ಯಾನ್ ಒಬ್ಬ ಕಾಂಗ್ರೆಸ್ ಕಾರ್ಯಕರ್ತನ ಮೇಲೆ ಗುಂಡು ಹಾರಿಸಿರುವುದನ್ನು ಮುಚ್ಚಲಾಗುತ್ತಿದೆ. ಈಗ ಜಗತ್ತಿಗೆ ನಿಖರವಾಗಿ ಏನಾಗಿದೆ

3ನೇ ಪುಟಕ್ಕೆ

ಪ.ಪೂ. ಶ್ರೀ ಶ್ರೀ ಸಿದ್ಧರಾಮ ನಂದಪುರಿ ಶ್ರೀಗಳಿಗೆ ಮೇಣದಬತ್ತಿ ಹಚ್ಚಿ ಶ್ರದ್ಧಾಂಜಲಿ



ಸಿರವಾರ.ಜ17-

ಕಲಬುರ್ಗಿ ವಿಭಾಗದ ಶಾಖ ಮಠದ ತಿಂತಿಣಿ ಬ್ರಿಡ್ಜ್ ಕನಕ ಗುರು ಪೀಠದ ಪರಮಪೂಜ್ಯ ಶ್ರೀ ಸಿದ್ದರಾಮನಂದಪುರಿ ಮಹಾಸ್ವಾಮಿಗಳು ನಿಧನರಾದ ಹಿನ್ನೆಲೆಯಲ್ಲಿ ಸಿರವಾರ ಪಟ್ಟಣದ ಕನಕ ವೃತ್ತದಲ್ಲಿ ಹಾಲುಮತ ಸಮಾಜದ ಮುಖಂಡರು ಹಾಗೂ ಅವರ ಅನುಯಾಯಿಗಳು ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಎಲ್ಲಾ ಯುವಕರು ಹಿರಿಯರು ಮೇಣದಬತ್ತಿ ಹಚ್ಚಿ ಭಾವಪೂರ್ಣ ಶ್ರದ್ಧಾಂಜಲಿಯನ್ನು ಅರ್ಪಿಸಿ ಎರಡು ನಿಮಿಷಗಳ ಕಾಲ ಮೌನ ಆಚರಣೆಯನ್ನು ಮಾಡಿ ಅವರ ಆತ್ಮಕ್ಕೆ ಶಾಂತಿಯನ್ನು ಕೋರಿ ಶ್ರದ್ಧಾಂಜಲಿಯನ್ನ ಅರ್ಪಿಸಿ

3ನೇ ಪುಟಕ್ಕೆ

ಮಹಿಳಾ ಸರ್ಕಾರಿ ನೌಕರರ ಸಬಲೀಕರಣಕ್ಕೆ ಸಂಘದ ಹೋರಾಟ ಅಗತ್ಯ : ರೋಶಿನಿ ಗೌಡ

ರಾಯಚೂರು,ಜ.17-

ರಾಜ್ಯದಲ್ಲಿನ ಸರ್ಕಾರಿ ಸೇವೆಯಲ್ಲಿರುವ ಮಹಿಳಾ ನೌಕರರು ಸಂವಿಧಾನಾತ್ಮಕ ಹಕ್ಕುಗಳಿದ್ದರೂ ಸಹ ಪುರುಷ ಪ್ರಧಾನ ಆಡಳಿತ ವ್ಯವಸ್ಥೆಯಲ್ಲಿ ನಿರ್ಲಕ್ಷ್ಯಕ್ಕೆ ಒಳಗಾಗುತ್ತಿದ್ದಾರೆ ಎಂದು ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘ (ರಿ) ರಾಜ್ಯಾಧ್ಯಕ್ಷೆ ರೋಶಿನಿ ಗೌಡ ಆತಂಕ ವ್ಯಕ್ತಪಡಿಸಿದರು.

ನಗರದ ಪತ್ರಿಕೆ ಭವನದಲ್ಲಿ ನಡೆದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಮಹಿಳಾ ನೌಕರರ ಸಮಸ್ಯೆಗಳನ್ನು ಇನ್ನೂ ಪ್ರಧಾನ ವಿಷಯವಾಗಿ ಪರಿಗಣಿಸಲಾಗುತ್ತಿಲ್ಲ. ಹಲವು ಸಂದರ್ಭಗಳಲ್ಲಿ ಮಹಿಳಾ ಸಮಸ್ಯೆಗಳನ್ನು ಅಪಹಾಸ್ಯಗೊಳಿಸುವ ಪ್ರವೃತ್ತಿ ಕಂಡುಬರುತ್ತಿದ್ದು, ಇದರ



ಪರಿಣಾಮವಾಗಿ ಸರ್ಕಾರಿ ಉದ್ಯೋಗಸ್ಥ ಮಹಿಳೆಯರು ವೃತ್ತಿಪರ ಮತ್ತು ವೈಯಕ್ತಿಕ ಬದುಕಿನಲ್ಲಿ ಅನೇಕ ಸಂಕಷ್ಟಗಳನ್ನು ಎದುರಿಸುತ್ತಿದ್ದಾರೆ ಎಂದು ಹೇಳಿದರು.

ಭಾರತ ಸಂವಿಧಾನದ ಪರಿಚ್ಛೇದ 15ರಡಿ ಮಹಿಳೆಯರಿಗೆ ವಿಶೇಷ ಅವಕಾಶಗಳನ್ನು ಕಲ್ಪಿಸಲು ರಾಜ್ಯ ಸರ್ಕಾರಕ್ಕೆ ಅಧಿಕಾರ ನೀಡಲಾಗಿದೆ. ವಿಶ್ವಸಂಸ್ಥೆ ಮತ್ತು ಅಂತರರಾಷ್ಟ್ರೀಯ ಕಾರ್ಮಿಕ ಸಂಸ್ಥೆಗಳ ಶಿಫಾರಸುಗಳಂತೆ ಮಹಿಳಾ ಉದ್ಯೋಗಿಗಳ ಸಬಲೀಕರಣಕ್ಕೆ ಸಂಬಂಧಿಸಿದ ನೀತಿ-ನಿಯಮಗಳನ್ನು ರಾಜ್ಯದ ಸ್ಥಳೀಯ ಪರಿಸ್ಥಿತಿಗೆ ಅನುಗುಣವಾಗಿ ಜಾರಿಗೆ ತರಬೇಕಾಗಿದೆ ಎಂದು ಅವರು ಒತ್ತಾಯಿಸಿದರು.

ರಾಜ್ಯದಲ್ಲಿರುವ 2.50 ಲಕ್ಷಕ್ಕೂ ಹೆಚ್ಚು ಮಹಿಳಾ ಸರ್ಕಾರಿ ನೌಕರರನ್ನು ಪ್ರತಿನಿಧಿಸುವ ಉದ್ದೇಶದಿಂದ ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘವನ್ನು ಸ್ಥಾಪಿಸಲಾಗಿದೆ. ಮಹಿಳಾ ನೌಕರರನ್ನು ಆಧುನಿಕ ವಿಜ್ಞಾನ, ಮಾಹಿತಿ ಮತ್ತು ತಂತ್ರಜ್ಞಾನಕ್ಕೆ ಹೊಂದಿಕೊಳ್ಳುವಂತೆ ತರಬೇತಿ ನೀಡುವುದು, ನಾಯಕತ್ವ ಗುಣಗಳನ್ನು ಬೆಳೆಸುವುದು ಹಾಗೂ ಆಡಳಿತಾತ್ಮಕ ಜವಾಬ್ದಾರಿಗಳ ಅರಿವು ಮೂಡಿಸುವುದು ಸಂಘದ ಪ್ರಮುಖ ಧ್ಯೇಯವಾಗಿದೆ ಎಂದು ತಿಳಿಸಿದರು.

ಸಂಘದ ಕಾರ್ಯಚಟುವಟಿಕೆಗಳು ಮಹಿಳಾ ನೌಕರರ ಕುಂದುಕೊರತೆಗಳಿಗೆ ಸ್ಪಂದಿಸಿ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ ನ್ಯಾಯ ಒದಗಿಸುವುದು, ಸೇವಾ ನಿಯಮಗಳು ಹಾಗೂ ಕೆಸಿಎಸ್‌ಆರ್ ನಡತೆ ನಿಯಮಗಳ ಬಗ್ಗೆ ಅರಿವು ಮೂಡಿಸುವುದು, ಕಿರುಕುಳ ಅಥವಾ ದೌರ್ಜನ್ಯ ಪ್ರಕರಣಗಳಲ್ಲಿ ಕಾನೂನು ನೆರವು ನೀಡುವುದು ಸಂಘದ ಪ್ರಮುಖ ಕಾರ್ಯಗಳಾಗಿವೆ ಎಂದು ಹೇಳಿದರು. ಜೊತೆಗೆ ಮಹಿಳಾ ಕೋ-ಆಪರೇಟಿವ್ ಸೊಸೈಟಿ, ಬ್ಯಾಂಕ್ ಹಾಗೂ ಗೃಹ ನಿರ್ಮಾಣ ಸಹಕಾರ ಸಂಘ ಸ್ಥಾಪನೆಯ ಉದ್ದೇಶವೂ ಇದೆ

3ನೇ ಪುಟಕ್ಕೆ

ದಿನ್ನಿ, ಮಟಮಾರಿ, ಓ ಹನುಮಪೂರ, ಗಟ್ಟುಬಿಚ್ಚಾಲಿ, ತುರುಕನಡೋಣ

ಗ್ರಾಮಗಳಲ್ಲಿ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕರಿಂದ ಚಾಲನೆ



ರಾಯಚೂರು ಜನವರಿ 17 (ಕ.ವಾ.): ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಜನವರಿ 17ರಂದು ರಾಯಚೂರು ಗ್ರಾಮೀಣ ಕ್ಷೇತ್ರದ ವ್ಯಾಪ್ತಿಯ ದಿನ್ನಿ, ಮಟಮಾರಿ, ಓ ಹನುಮಪೂರ, ಗಟ್ಟುಬಿಚ್ಚಾಲಿ ಹಾಗೂ ತುರುಕನಡೋಣ ಗ್ರಾಮಗಳಲ್ಲಿ ಪ್ರವಾಸ ಕೈಗೊಂಡರು.


ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮೈಕ್ರೋ ಯೋಜನೆಯಡಿ ದಿನ್ನಿ ಗ್ರಾಮದಲ್ಲಿ ತೇರುಬೀದಿ ರಸ್ತೆ ನಿರ್ಮಾಣ ಕಾಮಗಾರಿಗೆ, ಮಟಮಾರಿ ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ, ಓ ಹನುಮಪೂರ ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ,

3ನೇ ಪುಟಕ್ಕೆ

ರಾಯಚೂರು ಉತ್ಸವ-2026ರ ಪ್ರಚಾರಾರ್ಥ ವಾಲಿಬಾಲ್, ಕಬ್ಬಡಿ ಪಂದ್ಯ

ಸ್ಪರ್ಧೆಗಳಲ್ಲಿ 75 ತಂಡಗಳು ಭಾಗಿ





ರಾಯಚೂರು ಜನವರಿ 17 (ಕ.ವಾ.): ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಅಂಗವಾಗಿ ಜನವರಿ 17ರಂದು ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ವಾಲಿಬಾಲ್, ಕಬ್ಬಡಿ ಕ್ರೀಡಾಕೂಟಕ್ಕೆ ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ ಅವರು ಚಾಲನೆ ನೀಡಿದರು.

ಜಿಲ್ಲೆಯ ವಿವಿಧ ಶಾಲಾ ಕಾಲೇಜುಗಳಿಂದ ಸುಮಾರು 600ಕ್ಕೂ ಹೆಚ್ಚು ವಿದ್ಯಾರ್ಥಿಗಳ ಸುಮಾರು 75 ತಂಡಗಳಾಗಿ ವಿವಿಧ ಕ್ರೀಡೆಯಲ್ಲಿ ಭಾಗಿಯಾದರು.

ಕಬ್ಬಡಿಯಲ್ಲಿ ಪುರುಷರ 20 ತಂಡಗಳು ಮತ್ತು ಮಹಿಳೆಯರ 10 ತಂಡಗಳು ಭಾಗಿಯಾಗಿದ್ದವು. ಅಲ್ಲದೆ ವಾಲಿಬಾಲನಲ್ಲಿ ಪುರುಷರ 25 ತಂಡಗಳು ಮತ್ತು ಮಹಿಳೆಯರ 20 ತಂಡಗಳು ಭಾಗಿಯಾಗಿದ್ದವು.

ಇದೇ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಸಮಿತಿ ಕಾರ್ಯದರ್ಶಿ ಹಾಗೂ ಸರಕಾರಿ

3ನೇ ಪುಟಕ್ಕೆ

ರಾಯಚೂರು ಉತ್ಸವ-2026: ಲಗೋರಿ, ಚಿನ್ನಿದಾಂಡು ಸ್ಪರ್ಧೆಗಳಿಗೆ ಭರ್ಜರಿ ಸ್ಪಂದನೆ

67 ತಂಡಗಳ ನಡುವೆ ಭಾರೀ ಹಣಾಹಣಿ - ಜಿಲ್ಲಾ ಕ್ರೀಡಾಂಗಣದಲ್ಲಿ ದೇಶಿ ಕ್ರೀಡೆಗಳ ಕಲರವ

ರಾಯಚೂರು,ಜ.17-

ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ನಡೆದ ಲಗೋರಿ ಹಾಗೂ ಚಿನ್ನಿದಾಂಡು ಸ್ಪರ್ಧೆಗಳು ಅಕ್ಷರಶಃ ದೇಶಿ ಕ್ರೀಡೆಗಳ ಉತ್ಸವವಾಗಿ ಮಿಂಚಿದವು. ತಣ್ಣನೆಯ ಚಳಿಯ ನಡುವೆಯೂ ವಿದ್ಯಾರ್ಥಿಗಳು ಹಾಗೂ ಯುವಜನರ ಉತ್ಸಾಹ ಸ್ಪರ್ಧೆಗಳ ಮೆರಗು ಹೆಚ್ಚಿಸಿತು.

ನಾಡಹಬ್ಬ ರಾಯಚೂರು ಜಿಲ್ಲಾ ಉತ್ಸವ-2026ರ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ



ಆಶ್ರಯದಲ್ಲಿ ಈ ಕ್ರೀಡಾಸ್ಪರ್ಧೆಗಳು ಆಯೋಜಿಸಲಾಗಿತ್ತು. ಬೆಳಿಗ್ಗೆ ನಡೆದ ಕಾರ್ಯಕ್ರಮಕ್ಕೆ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಚಾಲನೆ ನೀಡಿದರು.

ನಗರದ ವಿವಿಧ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು ಹಾಗೂ ಜಿಲ್ಲೆಯ ಯುವಜನರನ್ನು ಸೇರಿಸಿಕೊಂಡು ಒಟ್ಟು 804 ಸ್ಪರ್ಧಿಗಳು, ತಲಾ 12 ಜನರಂತೆ 67 ತಂಡಗಳಾಗಿ ಸ್ಪರ್ಧೆಗಳಲ್ಲಿ ಭಾಗವಹಿಸಿದರು.

ಲಗೋರಿ ಸ್ಪರ್ಧೆಯಲ್ಲಿ ಪುರುಷರ 17 ತಂಡಗಳು ಹಾಗೂ ಮಹಿಳೆಯರ 16 ತಂಡಗಳು ಪಾಲ್ಗೊಂಡಿದ್ದರೆ, ಚಿನ್ನಿದಾಂಡು ಸ್ಪರ್ಧೆಯಲ್ಲಿ ಪುರುಷರ 18 ತಂಡಗಳು ಮತ್ತು ಮಹಿಳೆಯರ 16 ತಂಡಗಳು ತಮ್ಮ ಕೌಶಲ್ಯ ಪ್ರದರ್ಶಿಸಿದರು.

ಸ್ಪರ್ಧೆಗಳ ಮೇಲ್ವಿಚಾ ರಣೆಯನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿ ವೀರೇಶ ನಾಯಕ ವಹಿಸಿಕೊಂಡಿದ್ದು, ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧಿಕಾರಿ ರಂಗಸ್ವಾಮಿ ಸೇರಿದಂತೆ

3ನೇ ಪುಟಕ್ಕೆ

ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವ-2026

ಪತ್ರಕರ್ತರಿಗಾಗಿ ಕಥೆ-ಕವನ-ಲೇಖನ ಆಹ್ವಾನ

ರಾಯಚೂರು,ಜ.17-

ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವ-2026ರ ಅಂಗವಾಗಿ ಇಂದು ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾ ಸುದ್ದಿಗೋಷ್ಠಿ ನಡೆಸಲಾಯಿತು. ಗೋಷ್ಠಿಯನ್ನು ಉದ್ದೇಶಿಸಿ ಸಂಘದ ಅಧ್ಯಕ್ಷರಾದ ವಿಜಯ್ ಜಾಗಟಗಲ್ ಹಾಗೂ ವೆಂಕಟೇಶ್ ಹೂಗಾರ ಮಾತನಾಡಿದರು.

ಬೆಳ್ಳಿ ಮಹೋತ್ಸವದ ಸಂಭ್ರಮಾಚರಣೆಯ ಭಾಗವಾಗಿ ರಾಯಚೂರು ಜಿಲ್ಲೆ ಹಾಗೂ ರಾಜ್ಯದ ಎಲ್ಲಾ ಪತ್ರಕರ್ತರಿಗಾಗಿ ಕಥೆ, ಕವನ ಮತ್ತು ಲೇಖನಗಳನ್ನು ಆಹ್ವಾನಿಸಲಾಗಿದ್ದು, ಆಯ್ಕೆಯಾದ ಕೃತಿಗಳನ್ನು ಪ್ರತ್ಯೇಕವಾಗಿ ಮೂರು ಪುಸ್ತಕಗಳಾಗಿ ಪ್ರಕಟಿಸಲು ನಿರ್ಧರಿಸಲಾಗಿದೆ



ಎಂದು ತಿಳಿಸಿದರು.

ಪತ್ರಕರ್ತರಿಗಾಗಿ ರಾಜ್ಯಮಟ್ಟದ ಕಥಾ ಮತ್ತು ಕವನ ಸ್ಪರ್ಧೆ ಆಯೋಜಿಸಲಾಗಿದ್ದು, ಜೊತೆಗೆ ರಾಯಚೂರು ಜಿಲ್ಲಾ ಪತ್ರಕರ್ತರಿಂದ ವೃತ್ತಿ ಅನುಭವ ಆಧಾರಿತ ಲೇಖನಗಳನ್ನು ಆಹ್ವಾನಿಸಲಾಗಿದೆ. ಕಥೆ, ಕವನ ಹಾಗೂ ಲೇಖನಗಳನ್ನು ಫೆಬ್ರವರಿ 25, 2026ರೊಳಗಾಗಿ ಸ್ವೀಕರಿಸಲಾಗುವುದು ಎಂದು ಮಾಹಿತಿ ನೀಡಿದರು.

ಕಥಾ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನವಾಗಿ 10 ಸಾವಿರ ರೂ., ದ್ವಿತೀಯ ಬಹುಮಾನವಾಗಿ 7 ಸಾವಿರ ರೂ. ಹಾಗೂ ತೃತೀಯ ಬಹುಮಾನವಾಗಿ 3 ಸಾವಿರ ರೂ. ನೀಡಲಾಗುವುದು. ಕವನ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನವಾಗಿ 5 ಸಾವಿರ ರೂ., ದ್ವಿತೀಯ ಬಹುಮಾನವಾಗಿ 3 ಸಾವಿರ ರೂ. ಹಾಗೂ ತೃತೀಯ ಬಹುಮಾನವಾಗಿ 2 ಸಾವಿರ ರೂ. ನೀಡಲಾಗುತ್ತದೆ ಎಂದು ತಿಳಿಸಿದರು.

ಸ್ಪರ್ಧೆಗಳಿಗೆ ಯಾವುದೇ ನೋಂದಣಿ ಶುಲ್ಕ ಇರುವುದಿಲ್ಲ. ಸ್ಪರ್ಧೆಗೆ ಕಳುಹಿಸುವ ಕಥೆ ಹಾಗೂ ಕವನಗಳು ಸ್ವರಚಿತವಾಗಿದ್ದು, ಯಾವುದೇ ಪುಸ್ತಕ ಅಥವಾ ಪತ್ರಿಕೆಯಲ್ಲಿ ಪ್ರಕಟವಾಗಿರಬಾರದು. ಕಥೆ

3ನೇ ಪುಟಕ್ಕೆ

ಒಂದು ದಿನದ ತರಬೇತಿ ಮತ್ತು ಪರಿಕರಗಳ ವಿತರಣೆ

ಬೀದರ,ಜ.17-

ಗೋಡಂಬಿ ಬೆಳೆಗೆ ಭಾರತ ಸರ್ಕಾರದಿಂದ ಪರಿಶಿಷ್ಟ ಜಾತಿಯವರಿಗೆ ಎಷ್ಟು ಸಾಧ್ಯವೋ ಅಷ್ಟು ದೊರೆಯುವ ಅನುದಾನವನ್ನು ಮತ್ತು ಇತರೇ ಎಲ್ಲಾ ಸೌಲಭ್ಯಗಳನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಭಾರತೀಯ ಕೃಷಿ ಅನುಸಂಧಾನ ಸಂಶೋಧನಾ ಸಂಸ್ಥೆ- ಗೋಡಂಬಿ ಸಂಶೋಧನಾ ನಿರ್ದೇಶನಾಲಯ, ಪುತ್ತುರು, ದಕ್ಷಿಣ ಕನ್ನಡ ಜಿಲ್ಲೆಯ ನಿರ್ದೇಶಕ ಡಾ. ಜೆ. ದಿನಕರ ಅಡಿಗಾ ಅವರು ಹೇಳಿದರು.

ಅವರು ಗುರುವಾರ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟ, ತೋಟಗಾರಿಕೆ ಮಹಾವಿದ್ಯಾಲಯ ಬೀದರ, ತೋಟಗಾರಿಕೆ ವಿಸ್ತರಣಾ ಶಿಕ್ಷಣ ಕೇಂದ್ರ ಮತ್ತು ಭಾರತೀಯ ಕೃಷಿ ಸಂಶೋಧನಾ ಸಂಸ್ಥೆ-ಗೋಡಂಬಿ ಸಂಶೋಧನಾ ನಿರ್ದೇಶನಾಲಯ ಪುತ್ತುರು, ದಕ್ಷಿಣ ಕನ್ನಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ಐ.ಸಿ.ಎ.ಆರ್.-ಡಿ.ಸಿ.ಆರ್. ಪುತ್ತುರು, ದಕ್ಷಿಣ ಕನ್ನಡ ಇವರ ಆರ್ಥಿಕ ನೆರವು ಆಧಾರಿತ ತೋಟಗಾರಿಕೆ ನಾವೀನ್ಯತೆಗಳ ಅಳವಡಿಕೆ, ಪ್ರಚಾರ ಮತ್ತು ಕಾರ್ಯತಂತ್ರದ ಪರಿಕರಗಳ ವಿತರಣೆಯ ಮೂಲಕ ಕಲ್ಯಾಣ ಕರ್ನಾಟಕ ಪ್ರದೇಶದ ಪರಿಶಿಷ್ಟ (ಪ.ಜಾ) ಜಾತಿಯ ರೈತರ ಸಾಮರ್ಥ್ಯ ನಿರ್ಮಾಣದ ಮೂಲಕ ಆರ್ಥಿಕವಾಗಿ ವೃದ್ಧಿಗೊಳಿಸುವ ಕುರಿತು ತೋಟಗಾರಿಕೆ ಮಹಾವಿದ್ಯಾಲಯ,



ಬೀದರನಲ್ಲಿ ಆಯೋಜಿಸಲಾದ ಒಂದು ದಿನದ ತರಬೇತಿ ಮತ್ತು ಪರಿಕರಗಳ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸಮಾಜದಲ್ಲಿ ಶೋಷಿತ ವರ್ಗದವರು ಇತರೇ ವರ್ಗದವರಂತೆ ಮುನ್ನೆಲೆಗೆ ಬಂದು ಸಮಾನತೆ ತರುವ ಸದುದ್ದೇಶದಿಂದ ಭಾರತ ಸರ್ಕಾರ ಈ ಯೋಜನೆಯ ಅಡಿಯಲ್ಲಿ ವಿವಿಧ ರೀತಿಯ ಪರಿಕರಗಳನ್ನು ಮತ್ತು ತೋಟಗಾರಿಕಾ ಸಸಿಗಳನ್ನು ಪರಿಶಿಷ್ಟ ಜಾತಿಯ ಸುಮಾರು 100 ಜನ ಬೀದರ ಜಿಲ್ಲೆಯ ವಿವಿಧ ತಾಲೂಕಿನ ರೈತರಿಗೆ ನೇರವಾಗಿ ವಿತರಣೆ ಮಾಡಲು ಹಾಗೂ ಒಂದು ದಿನದ ತೋಟಗಾರಿಕಾ ಬೆಳೆಗಳನ್ನು ಬೆಳೆಯುವ ಮಾಹಿತಿಯನ್ನು ಒದಗಿಸುವ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಭಾರತೀಯ ಕೃಷಿ ಅನುಸಂಧಾನ ಸಂಶೋಧನಾ ಸಂಸ್ಥೆ-ಗೋಡಂಬಿ ಸಂಶೋಧನಾ ನಿರ್ದೇಶನಾಲಯ, ಪುತ್ತುರು, ದಕ್ಷಿಣ ಕನ್ನಡ ಜಿಲ್ಲೆಯ ನಿರ್ದೇಶಕ ಡಾ. ಜೆ. ದಿನಕರ ಅಡಿಗಾ ಅವರು ಹೇಳಿದರು.

ಬೀದರ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ. ಎಸ್.ವಿ. ಪಾಟೀಲ ಅವರು ಮಾತನಾಡಿ, ಪರಿಶಿಷ್ಟ ಜಾತಿ ರೈತರ ಆದಾಯ ದ್ವಿಗುಣಗೊಳಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ತೋಟಗಾರಿಕಾ ಸಸಿಗಳು ಹಾಗೂ ಉದ್ಯಾನ ಉಪಕರಣಗಳನ್ನು ಸ್ವತ: ತಾವೇ ಉಪಯೋಗಿಸಿದಲ್ಲಿ ಇಂತಹ ಕಾರ್ಯಕ್ರಮ ಹಮ್ಮಿಕೊಂಡಿರುವುದು ಸಾರ್ಥಕವಾಗುತ್ತದೆ. ಗೋಡಂಬಿ ಬೆಳೆಯನ್ನು ಬಂಜರೂ ಭೂಮಿಯಲ್ಲಿ ಯಥೇಚ್ಛವಾಗಿ ಬೆಳೆದು ಅತೀ ಕಡಿಮೆ ಖರ್ಚಿನಲ್ಲಿ ಉತ್ತಮ ವಾದ ಇಳುವರಿ ಮತ್ತು ಆದಾಯವನ್ನು ಪಡೆಯಬಹುದೆಂದು ಹೇಳಿದರು.

ಸುಮಾರು 100 ಜನ ಪರಿಶಿಷ್ಟ ಜಾತಿಯ ಅರ್ಹ ರೈತ ಫಲಾನುಭವಿಗಳಿಗೆ ತೋಟಗಾರಿಕಾ ಸಸಿಗಳಾದ ಮಾವು, ನುಗ್ಗೆ, ಅಶ್ವಗಂಧ, ತುಳಸಿ, ಸ್ಟೀವಿಯಾ ಮತ್ತು ರೋಸ್‌ಮೇರಿ ಮತ್ತು ಉದ್ಯಾನ ಉಪಕರಣಗಳಾದ ಗಾರ್ಡನ ಕ್ರೊಬಾರ್, ಸಿಕಲ್, ತೋಟದ ಕಳೆ ತೆಗೆಯುವಿಕೆ ಫೋರ್ಕ, ನೀರು ಹಾಕುವ ಝಾರಿ (ರೋಜ್ ಕ್ಯಾನ್), ಕೈಯಲ್ಲಿ ಹಿಡಿಯುವ ಗರಗಸ, ಕಳೆ ತೆಗೆಯುವ ಟ್ರೋವೆಲ್, ಸ್ಪೇಡ್ ಪಿಕಾಸ್, ಪ್ಲಾಸ್ಟಿಕ್ ಪೈಪ್, ಸಿಕೇಚರ್ ಹಾಗೂ ಪ್ಲಾಸ್ಟಿಕ್ ಬುಟ್ಟಿ ಇತ್ಯಾದಿಗಳ ಕಿಟ್‌ಗಳನ್ನು ಅತಿಥಿಗಳು ವಿತರಿಸಿದರು.

ವಿಜ್ಞಾನಿಗಳಾದ ಡಾ. ವಿ.ಪಿ. ಸಿಂಗ, ಡಾ. ವಿಜಯಮಹಾಂತೇಶ, ಡಾ. ಮುಹಮ್ಮದ್ ಫಾರೂಖ, ಡಾ. ಇಟಗಿ ಪ್ರಭಾಕರ್, ಡಾ. ಮಂಜೇಶ್ ಜಿ.ಎನ್., ಡಾ. ವೀಣಾ ಜಿ.ಎಲ್. ಮತ್ತು ಡಾ. ಅಂಬರೀಷ್ ಇವರು ಬರೆದಿರುವ ಉತ್ಪಾದನಾ ಸಾಮರ್ಥ್ಯ ಮತ್ತು ನವೀನ ತೋಟಗಾರಿಕಾ ತಂತ್ರಜ್ಞಾನಗಳ ಅಳವಡಿಕೆ ಎಂಬ ಪುಸ್ತಕವನ್ನು ಲೋಕಾರ್ಪಣೆಗೊಳಿಸಿದರು.

ಈ ಕಾರ್ಯಕ್ರಮದಲ್ಲಿ ಡಾ: ಮುಹಮ್ಮದ ಫಾರೂಖ, ಡಾ. ಅಬ್ದುಲ್ ಕರೀಮ ಎಮ್. ಡಾ. ಅಂಬರೀಶ, ಡಾ. ಪ್ರೀಯಾಂಕ ಮುಲಗೆ, ಆಂಜನೇಯ, ಬೀದರ ಜಿಲ್ಲೆಯ ವಿವಿಧ ತಾಲುಕಿನ ಅರ್ಹ ಪರಿಶಿಷ್ಟ ಜಾತಿಯ ಫಲಾನುಭವಿಗಳು ಹಾಗೂ ತೋಟಗಾರಿಕಾ ಮಹಾವಿದ್ಯಾಲಯದ ಶಿಕ್ಷಕ ಮತ್ತು ಶಿಕ್ಷಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು. ಡಾ. ವಿ.ಪಿ. ಸಿಂಗ, ಸ್ವಾಗತಿಸಿದರು. ಡಾ. ಹರೀಷ ಟಿ. ವಂದಿಸಿದರು. ಡಾ. ವಿಜಯಮಹಾಂತೇಶ ಕಾರ್ಯಕ್ರಮವನ್ನು ನಿರೂಪಿಸಿದರು. ಮಹಾವಿದ್ಯಾಲಯದ ವಿದ್ಯಾರ್ಥಿನಿಯರಾದ ಕು. ಪೂರ್ಣಿಮಾ ಮತ್ತು ಸಂಗಡಿಗರು ಪ್ರಾರ್ಥಿಸಿದರು.



ಟೇಕಿನಮಠದ ಶ್ರೀ ಮಲ್ಲಿಕಾರ್ಜುನ ದೇಶಿಕರ ನಿರಂಜನ ಚರಪಟ್ಟಾಧಿಕಾರ ಮಹೋತ್ಸವ

ದಾರಿಯುದ್ದಕ್ಕೂ ರಂಗೋಲಿಯ ಚಿತ್ತಾರ : ದೇವರ ನಾಮ ಸ್ಮರಣೆ : ಭಜನೆ

ಬಾಗಲಕೊಟೆ,ಜ.17-

ನಗರದ ಟೇಕಿನಮಠದ ಮಲ್ಲಿಕಾರ್ಜುನ ದೇಶಿಕರ ನಿರಂಜನ ಚರಪಟ್ಟಾಧಿಕಾರ ಮಹೋತ್ಸಸ ನಿಮಿತ್ಯ ಕಾರಣಿಕ ಯುಗ ಪುರುಷ ಕುಮಾರೇಶ್ವರ ಜ್ಯೋತಿ ರಥಯಾತ್ರೆ ಹಾಗೂ ಪ್ರಭಾತ ಪೇರಿ ಶೃಧ್ಧಾಭಕ್ತಿ ಯಿಂದ ಶುಕ್ರವಾರ ಜರುಗಿತು.

ಟೇಕಿನ ಮಠದಲ್ಲಿ ಕುಮಾರೇಶ್ವರ ಜ್ಯೋತಿ ರಥಯಾತ್ರೆಗೆ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಲಾಯಿತು, ಅಲ್ಲಿಂದ ಪ್ರಾರಂಭವಾದ ಜ್ಯೋತಿ ರಥಯಾತ್ರೆ ಹಾಗೂ ಪ್ರಭಾತ ಪೇರಿ ಪಶು ಆಸ್ಪತ್ರೆ ರಸ್ತೆ ಮೂಲಕ ಬಿವಿವಿ ಸಂಘದ ಆವರಣದಲ್ಲಿರುವ ಬೀಳೂರ ಅಜ್ಜನ ದೇವಸ್ಥಾನಕ್ಕೆ ಆಗಮಿಸಿ ನಂತರ ಸಂಘದ ಆವರಣದಲ್ಲಿರುವ ಎಲ್ಲ ಮಹಾವಿದ್ಯಾಲಯದ ಆಗಮಿಸಿ ಸಂಘದ ಕಚೇರಿಯಲ್ಲಿ ಪೂಜೆ ಸಲ್ಲಿಸಿ ನಂತರ ಕಣವಿ ವೀರಭದ್ರೇಶ್ವರ ದೇವಸ್ಥಾನದ ಬಳಿ ಸಮಾರೋಗೊಂಡಿತು. ಟೇಕಿನಮಠದಿಂದ ಬಿ.ವಿ.ವಿ.ಸಂಘದ ವರೆಗೂ ಹಾಗೂ ಸಂಘದ ಆವರಣದಲ್ಲಿ ಬಣ್ಣ ಬಣ್ಣದ ರಂಗೋಲಿ ಹಾಕಿ ಪುಷ್ಪಮಳೆ ಯನ್ನುಗರೆದು ಮಹಿಳೆಯರು ಸ್ವಾಗತ ಕೋರಿದ್ದು ವಿಶೇಷವಾಗಿತ್ತು. ಪ್ರಭಾತ ಪೇರಿಯಲ್ಲಿ ಭಜನೆ ಹಾಗೂ ದೇವರ ನಾಮಸ್ಮರಣೆಯೊಂದಿಗೆ ಸಾವಿರಾರು ಜನ ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಗುಳೆದಗುಡ್ಡದ ಒಪ್ಪತ್ತೇಶ್ವರ ಮಠದ ಪೂಜ್ಯರಾದ ಅಭಿನವ ಒಪ್ಪತ್ತೇಶ್ವರಸ್ವಾಮಿಗಳು ಮಾತನಾಡಿ ಪ್ರಭಾತ ಪೇರಿ ಇದು ಭಾರತದಲ್ಲಿ ಮನಸ್ಸುಗಳನ್ನು ಒಂದುಗೂಡಿಸುವ ಧಾರ್ಮಿಕ ಆಚರಣೆ,

ಹಬ್ಬದ ಸಂಭ್ರಮ ವಾಗಿದೆ, ಸಾಮಾಜಿಕ ಜಾಗೃತಿ ಅಥವಾ ದೇಶಭಕ್ತಿ, ಧಾರ್ಮಿಕತೆ ಸಂದೇಶವನ್ನು ಹರಡಲು ಬೆಳಿಗ್ಗೆ ಜಾವ ಬೇಗನೆ ಹೊರಟು ಒಂದು ಸಾಂಪ್ರಾದಾಯಿಕ ಮೆರವಣಿಯಾಗಿದ್ದು, ಇದರಲ್ಲಿ ಭಕ್ತಿಗೀತೆಗಳು, ಭಜನೆಗಳು ಮತ್ತು ವಾದ್ಯಗಳೊಂದಿಗೆ ಗ್ರಾಮದ ಬಿದಿಗಳಲ್ಲಿ ಪಾದ ಯಾತ್ರೆಯ ಮೂಲಕ ನಡೆಯಯುವ ಒಂದು ಆಚರಣೆ,

ಇದು ಕೆಟ್ಟ ಶಕ್ತಿಗಳನ್ನು ದುರಮಾಡಿ, ಒಳ್ಳೆಯ ಶಕ್ತಿಗಳನ್ನು ತರುತ್ತದೆ ಮತ್ತು ಆರೋಗ್ಯಕರ ಜೀವನಶೈಲಿಗೂ ಅವಶ್ಯವಾಗಿದೆ, ಭಗವಂತನ ನಾಮ ಸ್ಮರಣೇ, ಭಜನೆಗಳ ಮೂಲಕ ಆಧ್ಯಾತ್ಮಿಕತೆಯನ್ನು ಹೆಚ್ಚಿಸುತ್ತದೆ, ಸುಮಾರ 21 ದಿನಗಳ ಕಾಲ ನಡೆಯುವ ಈ ಪ್ರಭಾತ ಪೇರಿಯಲ್ಲಿ ಎಲ್ಲರೂ ಭಾಗವಹಿಸಿರಿ ಎಂದರು.

ಪ್ರಭಾತ ಪೇರಿಯಲ್ಲಿ ಟೇಕಿನಮಠದ ಮಲ್ಲಿಕಾರ್ಜುನ ದೇಶಿಕರ, ಬೆಳಗಾವಿ ಕಾರಂಜಿಮಠ, ಶಿವಯೋಗಿದೇವರು, ಪ್ರಭಾತಪೇರಿ ಸಮಿತಿಯ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ, ಪ್ರೋ. ರವಿ ಕೋಟೆನ್ನವರ, ವಿಜು ಅಂಗಡಿ, ಕುಮಾರ ಹಿರೇಮಠ, ಕುಮಾರ ಜಿಗಜಿನ್ನಿ, ಬಸವರಾಜ ಇಂಡಿ, ಬಸವರಾಜ ಮುಕುಪಿ, ಚಂದ್ರ ಶೇಖರ ಶೆಟ್ಟರ, ಶರಣಪ್ಪ ಗುಳೆದ, ಬಿ.ಕೆ.ದೇಸಾಯಿ ಯಲ್ಲಪ್ಪ ಬೆಂಡಿ ಗೇರಿ, ಪ್ರಶಾಂತ ಉಗರಗೋಳ, ಯಮನಾಳ, ಸೂಲಿಗಾವಿ, ಸಂಗಣ್ಣ ಶಿರೂರ, ರುದ್ರಪ್ಪ ಕತ್ತಿ, ನಾನೆಗೌಡ ಪಾಟೀಲ, ಮಲ್ಲಯ್ಯಸ್ವಾಮಿ ಕುಂದರಿಗಿಮಠ, ಶಾಂತಪ್ಪ ಬಾಡದ, ಪರಮೇಶ ಮಳ್ಳೂರ, ಗಂಗಯ್ಯ ಕೋಟೆ, ಶಂಕರ ತಾಳೊಕೋಟಿ, ವೀಜಯಲಕ್ಷ್ಮೀ ಭದ್ರಶೇಟ್ಟಿ, ಸರೋಜನಿ ಗಂಗಾವತಿ, ಸುಷ್ಮಾದೇವಿ ಒಡೆಯರ, ಸುರೇಖಾ ಸಬರದ, ಸುರೇಖಾ ದೇಶಪಾಂಡೆ, ರಾಜೇಶ್ವರಿ ತೆಗ್ಗಿ, ಜಯಶ್ರೀ ಹುಂಡೆಕಾರ, ಸುವರ್ಣ ಹೊರಗಿನಮಠ, ಸೇರಿದಂತೆ ವಿವಿಧ ಮಹಾ ವಿದ್ಯಾಲಯಗಳ ಪ್ರಾಚಾರ್ಯರು ಸಿಬ್ಬಂದಿ ಹಾಗು ವಿದ್ಯಾರ್ಥಿಗಳು ಸೇರಿದಂತೆ ಟೇಕಿನಮಠ ಎಲ್ಲ ಭಕ್ತಾಧಿಗಳು ಭಾಗವಹಿಸಿದ್ದರು.

ಮಲ್ಲಕಂಬ ಸ್ಪರ್ಧೆಯಲ್ಲಿ ಏಕನಾಥ ದಿವಟಗಿ ಸಾಧನೆ

ಬಾಗಲಕೋಟೆ,ಜ.17-

ಗುಜರಾತಿನಲ್ಲಿ ನಡೆದ ಕೆಲೋ ಇಂಡಿಯಾ ನ್ಯಾಷನಲ್ ಲೆವೆಲ್ ಬೀಚ್ ಮಲ್ಲಕಂಬ ಸ್ಪರ್ಧೆಯಲ್ಲಿ ತಾಲೂಕಿನ ತುಳಸಿಗೇರಿಯ ಏಕನಾಥ ದಿವಟಗಿ ಭಾಗವಹಿಸಿ ರಜತ ಪದಕ ಪಡೆದುಕೊಂಡಿದ್ದಾರೆ.

ಸದರಿ ಏಕನಾಥ



ದಿವಟರ ವಿದ್ಯಾಗಿರಿಯ ಸರಕಾರಿ ಮೆಟ್ರಿಕ್ ನಂತರದ ವಸತಿ ನಿಲಯಂದ'ಲ್ಲಿರ'ುವ' ವಿದ್ಯಾರ್ಥಿಯಾಗಿದ್ದು,

ಇತನ ಸಾಧನೆಗೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಸನ್ಮಾನಿಸಿ ಅಭಿನಂಧನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ, ಸಹಾಯಕ ನಿರ್ದೇಶಕ ರವಿ ಇದ್ದಲಗಿ, ವಸತಿ ನಿಲಯದ ಮೇಲ್ವಿಚಾರಕ ವಿನೋದ ರಾಠೋಡ ಇದ್ದರು.

ಏಕನಾಥ ದಿವಟಗಿಗೆ ಸಿ.ಕೆ.ಚನ್ನಾಳ ತರಬೇತಿ ನೀಡಿದ್ದರು.

ಹಂಪಿ ಉತ್ಸವ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್

ಹಂಪಿ ಉತ್ಸವ ನಾಡ ಹಬ್ಬವಿದ್ದಂತೆ ವಿಜೃಂಭಣೆಯ ವಿನೂತನ ಉತ್ಸವ ಆಚರಣೆಗೆ ಸಿದ್ದರಾಗಿ

ವಿಜಯನಗರ,ಜ.17-

ವಿಶ್ವ ಪ್ರಸಿದ್ಧಿ ವಿಶ್ವಪಾರಂಪರಿಕ ತಾಣವಾದ ಹಂಪಿ ಉತ್ಸವವು ನಾಡ ಹಬ್ಬವಿದ್ದಂತೆ, ಎಲ್ಲರೂ ಸೇರಿ ವಿಜೃಂಭಣೆಯಿಂದ ಹಾಗೂ ವಿನೂತನವಾಗಿ ಆಚರಿಸಲು ಎಲ್ಲಾ ಸಿದ್ದತೆ ಕೈಗೊಳ್ಳುವಂತೆ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಅಧಿಕಾರಿಗಳಿಗೆ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಹಂಪಿ ಉತ್ಸವ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಂಪಿ ಉತ್ಸವವು ಮುಂಬರುವ ಫೆಬ್ರವರಿ 13, 14 ಹಾಗೂ 15 ರಂದು ಹಮ್ಮಿಕೊಳ್ಳಲಾಗಿದೆ. ಫೆಬ್ರವರಿ 13ರಂದು ಹಂಪಿ ಉತ್ಸವಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ವಿದ್ಯುಕ್ತವಾಗಿ ಚಾಲನೆ ನೀಡುವರು. ಆದ್ದರಿಂದ ಅಧಿಕಾರಿಗಳು ಕಳೆದ ಬಾರಿಗಿಂತಲೂ ಈ ವರ್ಷ ಅಚ್ಚುಕಟ್ಟಾಗಿ ಆಯೋಜನೆ ಮಾಡುವ ನಿಟ್ಟಿನಲ್ಲಿ ಅಗತ್ಯ ಸಿದ್ದತೆ ಕೈಗೊಳ್ಳಬೇಕು. ಕಳೆದ ಬಾರಿ ಉಂಟಾದ ಲೋಪದೋಷ, ಇನ್ನಿತರೆ ಸಮಸ್ಯೆಗಳು ಮರುಕಳಿಸದಂತೆ ಅಗತ್ಯ ಕ್ರಮವಹಿಸಬೇಕು ಎಂದರು.

ಶಿಷ್ಟಾಚಾರದಂತೆ ವೇದಿಕೆ ಕಾರ್ಯಕ್ರಮ ಸಿದ್ದತೆ ಮಾಡಿಕೊಳ್ಳಬೇಕು. ಆರೋಗ್ಯ ಇಲಾಖೆಯಿಂದ ವೈದ್ಯಕೀಯ ತಪಸಣಾ ಶಿಬಿರ ಆಯೋಜನೆ ಮಾಡುವಂತೆ ನಿರ್ದೇಶಿಸಿದರು. ಪೊಲೀಸ್ ಇಲಾಖೆ ವತಿಯಿಂದ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಕೈಗೊಳ್ಳಬೇಕು ಎಂದು ತಿಳಿಸಿದ ಅವರು, ಜಿಲ್ಲೆಯ ವಿವಿಧ ತಾಲ್ಲೂಕು ಹಾಗೂ ಗ್ರಾಮೀಣ ಭಾಗದಿಂದ ಬರುವಂತಹ ಸಾರ್ವಜನಿಕರಿಗೆ ಕೆಎಸ್‌ಆರ್‌ಟಿಸಿ ವತಿಯಿಂದ ಸಾರಿಗೆ



ವ್ಯವಸ್ಥೆ, ಅಗತ್ಯ ಮೂಲಭೂತ ಸೌಕರ್ಯ ಒದಗಿಸಲಾಗುವುದು ಎಂದರು. ಉತ್ಸವದ ಅಂಗವಾಗಿ ಕಲೆ, ಚಿತ್ರಕಲೆ, ವಾಸ್ತುಶಿಲ್ಪ, ಫಲಪುಷ್ಪ ಪ್ರದರ್ಶನ, ಸಾಹಸ ಕ್ರೀಡೆ, ಸುಗಮ ಸಂಗೀತ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸ 'ಲಾಗುವುದು. ಸ್ಥಳೀಯ ಕಲಾವಿದರಿಂದ ವಿಜಯನಗರ ಸಾಮ್ರಾಜ್ಯದ ಆಡಳಿತ ಗತವೈಭವ ಕುರಿತ ಧ್ವನಿ ಬೆಳಕು ಪ್ರದರ್ಶನ ಮಾಡಲಾಗುತ್ತದೆ. ಅದರಂತೆ ಖ್ಯಾತ ಕಲಾವಿದರು ಹಂಪಿ ಉತ್ಸವದಲ್ಲಿ ಭಾಗವಹಿಸಿ ನಾಡಹಬ್ಬ ಹಂಪಿ ಉತ್ಸವಕ್ಕೆ ಮತ್ತಷ್ಟು ಮೆರಗು ತುಂಬಲಿದ್ದಾರೆ ಎಂದು ತಿಳಿಸಿದರು.

ವಿಶೇಷ ಡ್ರೋನ್ ಶೋ ಹಾಗೂ ಗಾಳಿಪಟ ಉತ್ಸವ: ಈ ಬಾರಿ ಉತ್ಸವದಲ್ಲಿ ವಿಶೇಷವಾಗಿ ಮುಂಬೈ ತಾಂತ್ರಿಕ ಕಲಾಬಳಗದಿಂದ ಮೂರು ಸಾವಿರ ಡ್ರೋನ್ ಬಳಸಿ ಡ್ರೋನ್ ಶೋ ಏರ್ಪಡಿಸಲಾಗಿದೆ. ಅದರಂತೆ ಗಾಳಿಪಟ ಉತ್ಸವ ಕೂಡ ಆಯೋಜಿಸಲಾಗಿದೆ. ಇವು ಈ ವರ್ಷದಲ್ಲಿನ ಹಂಪಿ ಉತ್ಸವದಲ್ಲಿ ಹೆಚ್ಚು ಆಕರ್ಷಣೀಯವಾಗಿದ್ದು, ಮತ್ತಷ್ಟು ರಂಗು ಹೆಚ್ಚಿಲಿವೆ ಎಂದರು.

ಇದೇ ಸಂದರ್ಭದಲ್ಲಿ ಹಂಪಿ ಉತ್ಸವ ಲೋಗೋ ಬಿಡುಗಡೆಗೊಳಿಸಿದರು. ಸಭೆಯಲ್ಲಿ ಹುಡಾ ಅಧ್ಯಕ್ಷ ಹೆಚ್.ಎನ್.ಎಫ್.ಇಮಾಮ್ ನಿಯಾಜಿ, ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ, ಜಿಲ್ಲಾ ಪಂಚಾಯತ್ ಸಿಇಓ ನೋಂಗ್ಜಾಯ್ ಅಹಮದ್ ಅಲಿ ಅಕ್ರಂ ಷಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜಾಹ್ನವಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಅನುಪಮ, ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣ, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

ವೇಗ ಪಡೆಯುತ್ತಿರುವ ಬೀದರ ಜಿಲ್ಲೆ ಕಲಾಗ್ರಾಮದ ಯೋಜನೆ

ಬೀದರ, ಜ.17-

ಕರ್ನಾಟಕದಲ್ಲಿಯೇ ಅಪರೂಪವಾದ ಕಲೆ ಸಂಸ್ಕೃತಿ ಹಾಗೂ ಮನರಂಜನೆಗೆ ಸಂಬಂಧಿಸಿದ ಕಲಾಗ್ರಾಮದ ಅಪರೂಪದ ಯೋಜನೆ ಬೀದರ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಬೀದರ ವಿಶ್ವವಿದ್ಯಾಲಯದದ ಆವರಣದಲ್ಲಿ ತಲೆ ಎತ್ತಲಿದೆ. ಕಲಾಗ್ರಾಮಕ್ಕಾಗಿ ಜಿಲ್ಲಾಡಳಿತ 10 ಎಕರೆ ಜಾಗವನ್ನು ನಿಗದಿ ಮಾಡಿದ್ದು ಬೀದರ ವಿಶ್ವವಿದ್ಯಾಲಯದ ಆವರಣದಲ್ಲಿ ಜಾಗವನ್ನು ಗುರುತಿಸಲಾಗಿದೆ. ಕಲಾ ಗ್ರಾಮದಲ್ಲಿ ಬೀದರ ಜಿಲ್ಲೆಯ ಕಲೆ, ಸಂಸ್ಕೃತಿ ಗಡಿಭಾಗದ ಅಪರೂಪದ ಕಲಾ ಪರಂಪರೆ, ಗುಡಿ ಕೈಗಾರಿಕೆ, ಕಿರುರಂಗಮಂದಿರ, ಮಕ್ಕಳ ಮನೋರಂಜನಾ ಪಾರ್ಕ, ವಸ್ತುಪ್ರದರ್ಶನ ಇತ್ಯಾದಿ ಹಲವು ಅಪರೂಪದ ಪರಿಚಯಾತ್ಮಕ ಸ್ವರೂಪವನ್ನು ಕಲಾಗ್ರಾಮ ಹೊಂದಿದೆ.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಈ ಕುರಿತು ವಿಶೇಷ ಕಾಳಜಿ ವಹಿಸಿದ್ದು, ಈಗಾಗಲೇ ಹಲವು ಸಭೆಗಳನ್ನು ಮಾಡಿ ಕಲಾಗ್ರಾಮದ ಅನುಷ್ಠಾನಕ್ಕೆ ತುರ್ತು ಕ್ರಮವಹಿಸಲು ಸಂಬಂಧಿಸಿದವರಿಗೆ ಸೂಚಿಸಿದ್ದಾರೆ. ಈ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಯೋಜನೆಯನ್ನು ತುರ್ತಾ



ಗಿ ಅನುಷ್ಠಾನಗೊಳಿಸಲು ಜಿಲ್ಲಾಧಿಕಾರಿಗಳು ವಿಶೇಷ ಮುತುವರ್ಜಿ ವಹಿಸಿದ್ದಾರೆ.

ಕಲಾಗ್ರಾಮದ ಸ್ಥಳ ಪರಿಶೀಲಿನೆಗಾಗಿ ಭಾಲ್ಕಿ, ತಾಲ್ಲೂಕಿನ ಹಾಲಹಳ್ಳಿ ಗ್ರಾಮದ ಪಕ್ಕ ಇರುವ ಸ್ಥಳವನ್ನು ಜಿಲ್ಲಾಧಿಕಾರಿಗಳು ಪರಿಶೀಲನೆ ಮಾಡಿ ನೈಸರ್ಗಿಕವಾಗಿ ಇರುವ ಸ್ಥಳದಲ್ಲಿಯೇ ವಿಶೇಷವಾದ ಕಲಾಗ್ರಾಮವನ್ನು ರೂಪಿ ಸಬಹುದಾಗಿದೆಯೆಂದು ತಿಳಿಸಿದರು. ವಿಶ್ವವಿದ್ಯಾಲಯ ಒಂದು ಶೈಕ್ಷಣಿಕವಾದ ಕೇಂದ್ರವಾಗಿರುವುದರಿಂದ ಕಲಾಗ್ರಾಮವು ಮಕ್ಕಳ ಶಿಕ್ಷಣಕ್ಕೆ ಪೂರಕವಾಗಿ ನಿರ್ಮಾಣವಾಗಲಿದೆ ಎಂದರು.

ಈ ಕುರಿತು ವಿಶ್ವವಿದ್ಯಾಲಯದ ಸಿಂಡಿಕೇಟ ಸದಸ್ಯರ ಜೊತೆ ಚರ್ಚಿಸಲು ವಿಶೇಷ ಸಭೆ ಆಯೋಜಿಸಿದ್ದಾರೆ. ಸ್ಥಳ ಪರಿಶೀಲನೆ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಬಿ.ಎಸ್. ಬಿರಾದಾರ ಹಾಜರಿದ್ದು ಅಗತ್ಯ ಸಹಕಾರ ನೀಡುವುದಾಗಿ ತಿಳಿಸಿದರು. ಸ್ಥಳ ಪರಿಶೀಲನೆ ಸಂದರ್ಭದಲ್ಲಿ ಕಲಬುರಗಿ ವಿಭಾಗದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ಬಸವರಾಜ ಹೂಗಾರ, ಬೀದರ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಶ್ರೀ ಸಿದ್ರಾಮ ಸಿಂಧೆಯವರು ಹಾಜರಿದ್ದರು.

ಬೀದರ ಜಿಲ್ಲೆಗೆ ಕಲಾಗ್ರಾಮ ಒಂದು ಮುಕುಟಮಣಿ, ಎಲ್ಲಾ ಸಾಹಿತಿಗಳ ಕಲಾವಿದರ ಬೀದರ ನೆಲದ ಸಾಂಸ್ಕೃತಿಕ ಹೆಮ್ಮೆಯ ತಾಣವಾಗಲು ಎಲ್ಲಾ ಅಧಿಕಾರಿಗಳು ವಿಶೇಷವಾಗಿ ಜಿಲ್ಲಾಧಿಕಾರಿಗಳು ಮುತುವರ್ಜಿ ವಹಿಸಿದ್ದು ಕೋರಿಕೆಗೆ ಸ್ಪಂದಿಸಿ ಕೂಡಲೇ ಸ್ಥಳ ಪರಿಶೀಲನೆ ಮಾಡಿ ಚಾಲನೆ ನೀಡಿದ್ದಕ್ಕೆ ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರಾದ ವಿಜಯಕುಮಾರ ಸೋನಾರೆ ಯವರು ಅಭಿನಂದನೆ ಸಲ್ಲಿಸಿದ್ದಾರೆ.

ಚಾಲುಕ್ಯ ಉತ್ಸವ : ಸಿದ್ದತೆ ಪರಿಶೀಲಿಸಿದ ಡಿಸಿ ಸಂಗಪ್ಪ



ಬಾಗಲಕೋಟೆ,ಜ.17-

ಚಾಲುಕ್ಯರ ಗತಕಾಲದ ವೈಭವವನ್ನು ಸಾರುವ ಚಾಲುಕ್ಯ ಉತ್ಸ-2026 ಹಿನ್ನಲೆಯಲ್ಲಿ ಬಾದಾಮಿ, ಪಟ್ಟದಕಲ್ಲ ಹಾಗೂ ಐಹೊಳೆಗೆ ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಓ ಶಶಿಧ ಕುರೇರ ಹಾಗೂ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ ಗುರುವಾರ ಭೇಟಿ ನೀಡಿ ಸಿದ್ದತೆ ಪರಿಶೀಲಿಸಿದರು.

ಜನವರಿ 19 ರಂದು ಬಾದಾಮಿ, 20 ರಂದು ಪಟ್ಟದಕಲ್ಲ ಹಾಗೂ 21 ರಂದು ಐಹೊಳೆಯಲ್ಲಿ ಉತ್ಸವ ಜರುಗಲಿದ್ದು, ಮುಖ್ಯ ವೇದಿಕೆ ಸ್ಥಳ ಪರಿಶೀಲಿಸಿ, ಸಿದ್ದತೆ ಪ್ರಕ್ರಿಯೆಯನ್ನು ವೀಕ್ಷಣೆ ಮಾಡಿದರು. ಚಾಲುಕ್ಯ ಉತ್ಸವವನ್ನು ಅದ್ದೂರಿಯಾಗಿ ಆಚರಿಸಲು ಉತ್ಸವದ ಸಿದ್ದತೆ ಭರದಿಂದ ಸಾಗಿದ್ದು, ಬೃಹತ್ ವೇದಿಕೆ ಹಾಕಲಾಗುತ್ತಿದ್ದು, ಸಾರ್ವಜನಿಕರ ವೀಕ್ಷಣೆಗೆ ಆಸನಗಳ ವ್ಯವಸ್ಥೆ, ಪಾರ್ಕಿಂಗ್ ಹಾಗೂ ಶೌಚಾಲಯಗಳ ವ್ಯವಸ್ಥೆ ಮಾಡಲು ಜಿಲ್ಲಾಧಿಕಾರಿಗಳು ಸೂಚಿಸಿದರು. ಭೇಟಿ ಸಮಯದಲ್ಲಿ ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕ ಣವಾಡಿ, ಹುನಗುಂದ ತಹಶೀಲ್ದಾರ, ಪ್ರದೀಪಕುಮಾರ ಹಿರೇಮಠ, ಉಪ ತಹಶೀಲ್ದಾರ ಎಸ್.ಬಿ.ಬೊನ್ನವರ ಸೇರಿದಂತೆ ಇತರೆ ಅಧಿಕಾರಿಗಳು ವಿವಿಧ ಸಮಿತಿಯ ಸದಸ್ಯರು ಇದ್ದರು.

ಗಣರಾಜ್ಯೋತ್ಸವ ಅರ್ಥಪೂರ್ಣ ಆಚರಣೆಗೆ ನಿರ್ಧಾರ : ಎಡಿಸಿ ತೇಲಿ

ಬಾಗಲಕೋಟೆ ,ಜ.17-

ಜಿಲ್ಲಾಡಳಿತದ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಜನವರಿ 26 ರಂದು ಜರುಗಲಿರುವ ಗ'ಣರಾಜ್ಯೋತ್'ಸ'ವ'ವ'ನ'್ನ ಅರ್ಥಪೂರ್ಣ, ವಿಶಿಷ್ಟ ಹಾಗೂ ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಇತ್ತೀಚೆಗೆ ಗಣರಾಜ್ಯೋತ್ಸವ ಆಚರಣೆ ಕುರಿತು ಜರುಗಿದ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಅಂದು ಬೆಳಿಗ್ಗೆ 8 ಗಂಟೆಗೆ ಜಿಲ್ಲಾಡಳಿತ ಭವನದ ಕಟ್ಟಡದ ಮೇಲೆ ಜಿಲ್ಲಾಧಿಕಾರಿಗಳಿಂದ ಧ್ವಜಾರೋಹಣ, 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಉಸ್ತುವಾರಿ ಸಚಿವರಿಂದ ಧ್ವಜಾರೋಹಣ ಹಾಗೂ ಸಚಿವರಿಂದ ಗಣರಾಜ್ಯೋತ್ಸವದ ಸಂದೇಶದ ನಂತರ ಶಾಲಾ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ



ಎಂದು ತಿಳಿಸಿದರು.

ಪಥಸಂಚಲನ ಕಾರ್ಯಕ್ರಮದಲ್ಲಿ ಪೊಲೀಸ್, ಗೃಹರಕ್ಷಕ ದಳ, ಸೇವಾದಳ, ಸ್ಕೌಟ್ ಆ್ಯಂಡ್ ಗೈಡ್ಸ್, ಎನ್.ಸಿ.ಸಿ. ಕೆಡೆಟ್‌ಗಳನ್ನು ಆಹ್ವಾನಿಸಲು ಸೂಚಿಸಲಾಯಿತು. ಧ್ವಜಾರೋಹಣ ವ್ಯವಸ್ಥೆ ಮಾಡಲು ಭಾರತ ಸೇವಾದಳ, ಪೊಲೀಸ್ ಇಲಾಖೆ, ತಹಶೀಲ್ದಾರ ಹಾಗೂ ಯುವಜನ ಸೇವಾ ಹಾಗೂ ಕ್ರೀಡಾಧಿಕಾರಿಗಳಿಗೆ ವಹಿಸಲಾಯಿತು. ಕಾರ್ಯಕ್ರಮಗಳ ಸಿದ್ದತೆಗೆ ಸಮಿತಿಗಳನ್ನು ರಚಿಸಲಾಗಿದ್ದು, ಪೂರ್ವ ತಯಾರಿಗಾಗಿ ಉಪ ಸಮಿತಿಗಳ ಸಭೆ ಕರೆದು ಬೇಕಾಗುವ ಎಲ್ಲ ರೀತಿಯ ಸಿದ್ದತೆಗಳನ್ನು ಮಾಡಿಕೊಳ್ಳಲು ಸೂಚಿಸಿದರು.

ಕ್ರೀಡಾಂಗಣದಲ್ಲಿ ವೇದಿಕೆ ನಿರ್ಮಾಣ, ಗಣ್ಯರಿಗೆ ಶಾಸಕರಿಗೆ, ಸಂಸದರುಗಳಿಗೆ ಹಾಗೂ ಪತ್ರಕರ್ತರಿಗೆ ಸೂಕ್ತ ಆಸನಗಳ ವ್ಯವಸ್ಥೆ, ಧ್ವನಿವರ್ಧಕ ಹಾಗೂ ಜನರೇಟರ್ ವ್ಯವಸ್ಥೆಯನ್ನು ಕೈಗೊಳ್ಳಲು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾಡಳಿತ ಭವನ ಹಾಗೂ ತಾಲೂಕ ಭವನಕ್ಕೆ ವಿದ್ಯುತ್ ಅಲಂಕಾರ ಮಾಡುವಂತೆ ತಿಳಿಸಲಾಯಿತು. ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿಗಳಿಗೆ ಸನ್ಮಾನಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಸದರಿ ದಿನದಂದು ಪೊಲೀಸ್ ಬಂದೂಬಸ್ತಿ ವ್ಯವಸ್ಥೆ ಮಾಡುವಂತೆ ಪೊಲೀಸ್ ಇಲಾಖೆಗೆ ಸೂಚಿಸಲಾಯಿತು. ರಾಷ್ಟ್ರೀಯ ಕಾರ್ಯಕ್ರಮವಾಗಿರುವದರಿಂದ ಜಿಲ್ಲೆಯ ಎಲ್ಲ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಹಾಜರಾಗಿ ಕಾರ್ಯಕ್ರಮ ಯಶಸ್ವಿಗೊಳಿಸಲು ಅಪರ ಜಿಲ್ಲಾಧಿಕಾರಿಗಳು ಕರೆ ನೀಡಿದರು.

ಸಭೆಯಲ್ಲಿ ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ರವೀಂದ್ರ ಹಕಾಟಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ, ಪ್ರವಾಸೋದ್ಯಮ ಇಲಾಖೆಯ ಉಪನಿದೇಶಕ ಜಿ.ಎಸ್.ಹಿತ್ತಲಮನಿ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಬಳ್ಳಾರಿ ಗಲಭೆ : ಸಿಬಿಐ ತನಿಖೆಗೆ ಆಗ್ರಹಿಸಿ ಕಾಂಗ್ರೆಸ್ ವಿರುದ್ಧ ರಣಕಹಳೆ ಮೊಳಗಿಸಿದ ಬಿಜೆಪಿ

ಎಂದು ತಿಳಿದಿದೆ. ಆದರೂ ಏಕೆ ಅವರನ್ನು ಬಂಧಿಸಲಾಗಿಲ್ಲ ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಅಪರಾಧಿಗಳನ್ನು ಮಾತ್ರ ಬೆಂಬಲಿಸುತ್ತದೆ. ಡಿ.ಕೆ ಶಿವಕುಮಾರ್ ಅವರಿಂದ ನಾವು ಏನನ್ನೂ ನಿರೀಕ್ಷಿಸಲು ಸಾಧ್ಯವಿಲ್ಲ. ಒಬ್ಬ ಆರೋಪಿಯು ಇಂತಹ ಕ್ರಿಮಿನಲ್ ಹಿನ್ನಲೆಯಲ್ಲಿ ಉಳ್ಳವರಿಗೆ ಬೆಂಬಲಿಸಲು ಸಾಧ್ಯ ಎಂದು ಬಿಜೆಪಿ ನಾಯಕರು ಟೀಕಾ ಪ್ರಹಾರ ನಡೆಸಿದರು.

ಸಮಾವೇಶದಲ್ಲಿ ರಾಜ್ಯ ಬಿಜೆಪಿ ಅಧ್ಯಕ್ಷ ವಿಜಯೇಂದ್ರ, ಪ್ರತಿಪಕ್ಷದ ನಾಯಕ ಆರ್.ಅಶೋಕ್, ವಿಧಾನಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವರಾದ ಜನಾರ್ದನರೆಡ್ಡಿ, ಶ್ರೀರಾಮುಲು, ಸಂಸದ ಗೋವಿಂದ ಕಾರಜೋಳ, ರಾಜ್ಯ ಬಿಜೆಪಿ ಸಹ ಉಸ್ತುವಾರಿ ಸುಧಾಕರ್ ರೆಡ್ಡಿ, ಮಾಜಿ ಮುಖ್ಯಮಂತ್ರಿ ಬಸವರಾಜ್ ಬೊಮಯಿ, ಶಾಸಕರಾದ ಸುನೀಲ್‌ಕುಮಾರ್, ದೊಡ್ಡನಗೌಡ ಪಾಟೀಲ್ ಸೇರಿದಂತೆ ಪ್ರಮುಖರು ಭಾಗವಹಿಸಿದ್ದರು.

ಪ.ಪೂ. ಶ್ರೀ ಶ್ರೀ ಸಿದ್ಧರಾಮ ನಂದಪುರಿ ಶ್ರೀಗಳಿಗೆ ಮೇಣದಬತ್ತಿ ಹಚ್ಚಿ ಶ್ರದ್ಧಾಂಜಲಿ

ದರು. ಈಗಳ ಬಗ್ಗೆ ಯುವ ಮುಖಂ ಡರುಗಳು ಮಾತನಾಡಿದರು. ಈ ಸಂದರ್ಭದಲ್ಲಿ ಸಮಾಜದ ಮುಖಂ ಡರುಗಳಾದ ಎಚ್ ಕೆ ಶಿವಗೇನಿ, ರಾಘವೇಂದ್ರ ಮರಾಠ್, ಎಚ್ ಕೆ ಕರಿಯಪ್ಪ, ಆಂಜನೇಯ ಬಿಚ್ಚಾಲಿ, ಹನುಮೇಶ ಅಶಿನಾಳ, ಆಂಜನೇಯ ಬಿಚ್ಚಾಲಿ, ಹಾಗೂ ಸಮಸ್ತ ಸಮಾ ಜದ ಮುಖಂಡರು ಯುವಕರು ಉಪಸ್ಥಿತರಿದ್ದರು.

ಮಹಿಳಾ ಸರ್ಕಾರಿ ನೌಕರರ ಸಬಲೀಕರಣಕ್ಕೆ ಸಂಘದ ಹೋರಾಟ ಅಗತ್ಯ : ರೋಶಿನಿ ಗೌಡ

ಎಂದು ಮಾಹಿತಿ ನೀಡಿದರು.

ಎರಡು ವರ್ಷಗಳ ಸಾಧನೆ: ಸಂಘ ಸ್ಥಾಪನೆಯ ಬಳಿಕ ಕಬ್ಬನ್ ಉದ್ಯಾನವನದ ಬಾಲಭವನ ಆವರಣದಲ್ಲಿ ಕಚೇರಿ ಆರಂಭಿಸಲಾಗಿದೆ. ರಾಜ್ಯದ ಎಲ್ಲಾ ಜಿಲ್ಲೆ ಮತ್ತು ತಾಲ್ಲೂಕುಗಳಲ್ಲಿ ಶಾಖೆಗಳನ್ನು ಸ್ಥಾಪಿಸಿ, ಹೆಚ್ಚಿನ ಸಂಖ್ಯೆಯಲ್ಲಿ ಮಹಿಳಾ ನೌಕರರನ್ನು ಸದಸ್ಯರನ್ನಾಗಿ ನೋಂದಾಯಿಸಲಾಗಿದೆ. ಮಹಿಳಾ ದಿನಾಚರಣೆ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ಹೋರಾಟಗಳಲ್ಲಿ ಸಕ್ರಿಯ ಪಾತ್ರ ಹಾಗೂ ಋತುಚಕ್ರ ರಜೆ ಮಂಜೂರಿಗೆ ಸರ್ಕಾರದ ಮಟ್ಟದಲ್ಲಿ ಚರ್ಚೆಗೂಡಿಸಿರುವುದು ಪ್ರಮುಖ ಸಾಧನೆಯಾಗಿದೆ ಎಂದು ಹೇಳಿದರು.

ಪ್ರಮುಖ ಬೇಡಿಕೆಗಳು: 8ನೇ ವೇತನ ಆಯೋಗ ರಚನೆ, ಎನ್‌ಪಿಎಸ್ ರದ್ದತಿ ಮಾಡಿ ಓಪಿಎಸ್ ಜಾರಿ, ಮಾತೃತ್ವ ರಜೆಯನ್ನು ಒಂದು ವರ್ಷವರೆಗೆ ವಿಸ್ತರಿಸುವುದು, ಗರ್ಭಿಣಿ ನೌಕರರಿಗೆ ಮಾಸಿಕ ಒಂದು ದಿನ ವೇತನ ಸಹಿತ ವೈದ್ಯಕೀಯ ರಜೆ ನೀಡುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಅವರು ಮುಂದಿಟ್ಟರು. ಸೆಪ್ಟೆಂಬರ 13ನ್ನು ಮಹಿಳಾ ಸರ್ಕಾರಿ ನೌಕರರ ದಿನವೆಂದು ಘೋಷಿಸುವುದು ಹಾಗೂ ಹಬ್ಬದ ಮುಂಗಡ ಹಣವನ್ನು ₹50,000ಕ್ಕೆ ಹೆಚ್ಚಿಸಬೇಕು ಎಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ವೀಣಾ ಕೃಷ್ಣಮೂರ್ತಿ, ಆಶಾ ರಾಣಿ, ವಿಜಯಲಕ್ಷ್ಮಿ, ವಾಣಿ ಪ್ರಕಾಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ದಿನ್ನಿ, ಮಟಮಾರಿ, ಓ ಹನುಮಪೂರ, ಗಟ್ಟುಬಿಚ್ಚಾಲಿ, ತುರುಕನಡೋಣ ಗ್ರಾಮಗಳಲ್ಲಿ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕರಿಂದ ಚಾಲನೆ

ಗಟ್ಟುಬಿಚ್ಚಾಲಿ ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ, ತುರುಕನಡೋಣ, ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಶಾಸಕರು ಭೂಮಿಪೂಜೆ ನೆರವೇರಿಸಿದರು.

ತುರುಕನಡೋಣ ಗ್ರಾಮದಲ್ಲಿ ಕೆಕೆಆರ್‌ಡಿಬಿ ಮತ್ತು ನಬಾರ್ಡ್ ಅನುದಾನದಡಿ ನಿರ್ಮಿಸಲಾದ ಪ್ರೌಢಶಾಲಾ ಕಟ್ಟಡವನ್ನು ಇದೆ ವೇಳೆ ಶಾಸಕರು ಲೋಕಾರ್ಪಣೆ ಮಾಡಿದರು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯ ಮುಖಂಡರು, ಸುತ್ತಲಿನ ಗ್ರಾಮಗಳ ಹಿರಿಯ ಮುಖಂಡರು, ನಾಮ ನಿರ್ದೇಶಿತ ಸದಸ್ಯರು, ಅಧಿಕಾರಿಗಳು ಮತ್ತು ವಿವಿಧ ಗ್ರಾಮಗಳ ಗ್ರಾಮ ಪಂಚಾಯತ್ ಅಧ್ಯಕ್ಷರು ಮತ್ತು ಸದಸ್ಯರು ಹಾಗೂ ಕಾರ್ಯಕರ್ತರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

ರಾಯಚೂರು ಉತ್ಸವ-2026ರ ಪ್ರಚಾರಾರ್ಥ ವಾಲಿಬಾಲ್, ಕಬ್ಬಡಿ ಪಂದ್ಯ

ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾವಂತಗೇರಾ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿ ವೀರೇಶ ನಾಯಕ, ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧಿಕಾರಿ ರಂಗಸ್ವಾಮಿ, ಜಿಲ್ಲಾ ದೈಹಿಕ ಶಿಕ್ಷಕರ ಸಂಘದ ಪರುಶರಾಮು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸೂಪರಿಡೆಂಟ್ ಸಂತೋಷ್, ಚಂದ್ರಶೇಖರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿ ಇದ್ದರು.

ರಾಯಚೂರು ಉತ್ಸವ-2026: ಲಗೋರಿ, ಚಿನ್ನಿದಾಂಡು ಸ್ಪರ್ಧೆಗಳಿಗೆ ಭರ್ಜರಿ ಸ್ಪಂದನೆ

67 ತಂಡಗಳ ನಡುವೆ ಭಾರೀ ಹಣಾಹಣಿ - ಜಿಲ್ಲಾ ಕ್ರೀಡಾಂಗಣದಲ್ಲಿ ದೇಶಿ ಕ್ರೀಡೆಗಳ ಕಲರವ

ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

ದೇಶಿ ಕ್ರೀಡೆಗಳಿಗೆ ದೊರೆತ ಭರ್ಜರಿ ಸ್ಪಂದನೆ, ಯುವಜನರಲ್ಲಿ ಪರಂಪರೆಯ ಕ್ರೀಡೆಗಳ ಮೇಲಿರುವ ಆಸಕ್ತಿಯನ್ನು ಮತ್ತೊಮ್ಮೆ ಸ್ಪಷ್ಟಪಡಿಸಿತು.

ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವ-2026 ಪತ್ರಕರ್ತರಿಗಾಗಿ ಕಥೆ-ಕವನ-ಲೇಖನ ಆಹ್ವಾನ

ಗರಿಷ್ಠ 1500 ಪದಗಳ ಮಿತಿಯಲ್ಲಿ ಇರಬೇಕು. ಸ್ಪರ್ಧೆಯಲ್ಲಿ ಭಾಗವಹಿಸುವವರು ಕಡ್ಡಾಯವಾಗಿ ಪತ್ರಕರ್ತರಾಗಿರಬೇಕು ಎಂದು ಅವರು ಸ್ಪಷ್ಟಪಡಿಸಿದರು.

ಕಥೆ ಅಥವಾ ಕವನದೊಂದಿಗೆ ಕೆಲಸ ಮಾಡುತ್ತಿರುವ ಸುದ್ದಿ ಸಂಸ್ಥೆ ನೀಡಿದ ಗುರುತಿನ ಚೀಟಿ ಅಥವಾ ಅಕ್ರಿಡಿಟೇಶನ್ ಚೀಟಿ ಕಡ್ಡಾಯವಾಗಿದೆ. ಒಬ್ಬ ಪತ್ರಕರ್ತ ಒಂದು ಕಥೆ ಹಾಗೂ ಒಂದು ಕವನಕ್ಕೆ ಮಾತ್ರ ಸ್ಪರ್ಧಿಸಬಹುದಾಗಿದೆ. ಕಥೆ, ಕವನ ಹಾಗೂ ಲೇಖನಗಳನ್ನು ನುಡಿ ಅಥವಾ ಯೂನಿಕೋಡ್ ತಂತ್ರಾಂಶದಲ್ಲಿ ಸಿದ್ಧಪಡಿಸಿ ಇ-ಮೇಲ್ ಮೂಲಕ ಕಳುಹಿಸಬೇಕು. ರಾಯಚೂರು ಜಿಲ್ಲಾ ಪತ್ರಕರ್ತರು 400 ಪದಗಳ ಮಿತಿಯಲ್ಲಿ ಲೇಖನ ಕಳುಹಿಸಬೇಕು. ಆಯ್ಕೆಯಾದ ಲೇಖನಗಳನ್ನು ಪುಸ್ತಕದಲ್ಲಿ ಪ್ರಕಟಿಸಲಾಗುವುದು. ಲೇಖನಗಳಿಗೆ ಯಾವುದೇ ಬಹುಮಾನ ಇರುವುದಿಲ್ಲ. ಲೇಖನದೊಂದಿಗೆ ಪ್ರತ್ಯೇಕ ಹಾಳೆಯಲ್ಲಿ ಹೆಸರು, ವಿಳಾಸ, ಕಿರುಪರಿಚಯ, ಭಾವಚಿತ್ರ, ಮೊಬೈಲ್ ಸಂಖ್ಯೆ ಹಾಗೂ ಇ-ಮೇಲ್ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು. ಕಥೆ, ಕವನ ಹಾಗೂ ಲೇಖನಗಳ ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರಲಿದೆ ಎಂದು ತಿಳಿಸಿದರು.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ ಮೇಲ್ : rrgraichurgmail.com ಗೆ ಕಳುಹಿಸಬೇಕು. 9964804206, 9739334156, 8971451949 ಹಾಗೂ 9902059734 ಅನ್ನು ಸಂಪರ್ಕಿಸಬಹುದು. ಈ ಸಂದರ್ಭದಲ್ಲಿ ವೆಂಕಟೇಶ್ ಹೂಗಾರ, ಶ್ರೀಕಾಂತ್ ಸವೂರು, ಚನ್ನಬಸವ ಬಾಗಲವಾಡ ಹಾಗೂ ಖಾನ್ ಸಾಬ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ: ಜನವರಿ 21 ಮತ್ತು 22ಕ್ಕೆ ಸರ್ಕಾರಿ ನೌಕರರ ಕ್ರೀಡಾಕೂಟ ಆಯೋಜನೆಗೆ ನಿರ್ಧಾರ

ಕಲಬುರಗಿ,ಜ.17-

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಕಲಬುರಗಿ ಜಿಲ್ಲಾ ಘಟಕ ಸಂಯುಕ್ತಾಶ್ರಯದಲ್ಲಿ ಇದೇ ಜನವರಿ 21 ಮತ್ತು 22 ರಂದು ರಾಜ್ಯ ಸರ್ಕಾರಿ ನೌಕರರಿಗಾಗಿ 2025-26ನೇ ಸಾಲಿನ ಜಿಲ್ಲಾ ಮಟ್ಟದ ವಾರ್ಷಿಕ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳು ಆಯೋಜನೆಗೆ ಶುಕ್ರವಾರ ಜರುಗಿದ ಸಭೆಯಲ್ಲಿ ನಿರ್ಧರಿಸಲಾಗಿದೆ.

ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕ್ರೀಡಾಕೂಟ ಸಂಬಂಧ ಜರುಗಿದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು, ಜಿಲ್ಲೆಯ ಎಲ್ಲಾ ಸರ್ಕಾರಿ ನೌಕರರು ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಮತ್ತು ಇದಕ್ಕಾಗಿ ಕೂಡಲೆ ಹೆಸರು ನೊಂದಣಿ ಮಾಡಿಕೊಳ್ಳಬೇಕೆಂದ ಅವರು, ಈ ಕುರಿತು ಎಲ್ಲಾ ಇಲಾಖೆಯ ಸೂಚನಾ ಫಲಕದಲ್ಲಿ ಕ್ರೀಡಾಕೂಟದ ಬಗ್ಗೆ ಪೋಸ್ಟರ್ ಅಂಟಿಸಿ ಪ್ರಚಾರ ಮಾಡಬೇಕು ಎಂದು ನೌಕರರ ಸಂಘದ ಪದಾಧಿಕಾರಿಗಳಿಗೆ ತಿಳಿಸಿದರು.

ಜನವರಿ 21 ರಂದು ಚಂದ್ರಶೇಖರ್ ಪಾಟೀಲ ಕ್ರೀಡಾಂಗಣದಲ್ಲಿ ಎಲ್ಲಾ ಮಾದರಿಯ ಕ್ರೀಡೆಗಳು ಜರುಗಲಿವೆ. ಅದೇ ರೀತಿ ಜನವರಿ 22 ರಂದು ನಗರದ ಕನ್ನಡ ಭವನದಲ್ಲಿ ಸಾಂಸ್ಕೃತಿಕ ಸ್ಪರ್ಧೆ ಆಯೋಜನೆ ಮಾಡಿದ್ದು, ನೌಕರರು ದೈನಂದಿದ ಕೆಲಸದ ಒತ್ತಡದಿಂದ ಹೊರಬರಲು ಇದೊಂದು ಉತ್ತಮ ಅವಕಾಶವಾಗಿದ್ದು, ಕ್ರೀಡೆ ಮತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಭಾಗವಹಿಸಬೇಕು. ಕ್ರೀಡಾಕೂಟದಲ್ಲಿ ಭಾಗವಹಿಸುವ ನೌಕರರಿಗೆ ಓ.ಓ.ಡಿ ಸೌಲಭ್ಯ ಕಲ್ಪಿಸಲಾಗುವುದು ಎಂದು ಡಿ.ಸಿ. ತಿಳಿಸಿದರು.

ಠಾಣಾಕುಶನೂರ ಹೋಬಳಿಯಲ್ಲಿ ಶಾಸಕ ಪ್ರಭು ಚವ್ಹಾಣ ಗ್ರಾಮ ಸಂಚಾರ

ಪಡಿತರ ವಿತರಣೆ ಸಮಸ್ಯೆ ಸರಿಪಡಿಸಲು ಅಧಿಕಾರಿಗಳಿಗೆ ಸೂಚನೆ



ಔರಾದ್,ಜ.17-

ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಪಡಿತರ ವಿತರಣೆಯಲ್ಲಿ ತೊಂದರೆಗಳು ಎದುರಾಗುತ್ತಿರುವ ಬಗ್ಗೆ ದೂರುಗಳು ಬರುತ್ತಿದ್ದು, ತಕ್ಷಣ ಸಮಸ್ಯೆಗಳನ್ನು ಸರಿಪಡಿಸಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕಮಲನಗರ ತಾಲ್ಲೂಕಿನ ಠಾಣಾ ಕುಶನೂರ ಹೋಬಳಿ ವ್ಯಾಪ್ತಿಯಲ್ಲಿನ ಲಿಂಗದಳ್ಳಿ(ಯು), ಮುಧೋಳ(ಬಿ), ತೋರ್ಣಾವಾಡಿ, ತೋರ್ಣಾ, ಹೊಳಸಮುದ್ರ, ಸಾವಳಿ, ಬಸನಾಳ, ಕೋರಿಯಾಳ, ಮುಧೋಳ(ಕೆ)ನಲ್ಲಿ ಗ್ರಾಮ ಸಂಚಾರ ನಡೆಸಿ ಅವರು ಮಾತನಾಡಿದರು.

ಕೆಲವು ಪಡಿತರ ಅಂಗಡಿಗಳಲ್ಲಿ ಸರಿಯಾದ ಸಮಯಕ್ಕೆ ಅಕ್ಕಿ, ಗೋಧಿ ಸೇರಿದಂತೆ ಅಗತ್ಯ ವಸ್ತುಗಳು ವಿತರಣೆ ಆಗುತ್ತಿಲ್ಲ, ಫಲಾನುಭವಿಗಳ ಹೆಸರುಗಳು ಪಟ್ಟಿಯಿಂದ ಕೈ ತಪ್ಪಿರುವುದು, ತಾಂತ್ರಿಕ ಸಮಸ್ಯೆಗಳ ಹೆಸರಿನಲ್ಲಿ ಸಾರ್ವಜನಿಕರನ್ನು ಅಲಕ್ಷ್ಯ ಮಾಡುವಂತಹ ಪ್ರಕರಣಗಳು ಕೇಳಿ ಬರುತ್ತಿವೆ. ಇಂತಹ ಸಮಸ್ಯೆಗಳಿಗೆ ನಿರ್ಲಕ್ಷ್ಯ ವಹಿಸಬಾರದೆಂದು ಹೇಳಿದರು.

ಲಿಂಗದಳ್ಳಿ(ಯು) ಗ್ರಾಮಸ್ಥರು ಪ್ರತಿ ತಿಂಗಳು ಪಡಿತರಕ್ಕಾಗಿ ಎಲ್ಲ ಕೆಲಸ ಕಾರ್ಯಗಳನ್ನು ಬಿಟ್ಟು ಪಕ್ಕದ ಊರಿಗೆ ಹೋಗಬೇಕು. ಇದರಿಂದ ವಯಸ್ಸಾದವರು, ಆರೋಗ್ಯ ಸಮಸ್ಯೆ ಇರುವವರು ಒಳಗೊಂಡು ಎಲ್ಲರಿಗೂ ಸಮಸ್ಯೆಯಾಗುತ್ತಿದೆ. ದಯವಿಟ್ಟು ನಮ್ಮ ಗ್ರಾಮದಲ್ಲೇ ಪಡಿತರ ವಿತರಿಸಲು ವ್ಯವಸ್ಥೆ ಮಾಡಬೇಕೆಂದು ಗ್ರಾಮಸ್ಥರು ಶಾಸಕರಿಗೆ ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಶಾಸಕರು ಗ್ರಾಮಸ್ಥರ ಹಿತದೃಷ್ಟಿಯಿಂದ ಮುಂದಿನ ತಿಂಗಳಿನಿಂದ ಗ್ರಾಮದಲ್ಲಿಯೇ ಪಡಿತರ ಸಿಗುವಂತೆ ವ್ಯವಸ್ಥೆ ಮಾಡಬೇಕೆಂದು ತಿಳಿಸಿದರು.

ಅರ್ಹ ಫಲಾನುಭವಿಗಳಿಗೆ ಪಡಿತರ ವಿತರಣೆ ಯಾವುದೇ ಅಡೆತಡೆ ಇಲ್ಲದೆ ನಡೆಯಬೇಕು. ಅಧಿಕಾರಿಗಳು ಸ್ಥಳೀಯ ಮಟ್ಟದಲ್ಲಿ ಪರಿಶೀಲನೆ ನಡೆಸಿ, ದೂರುಗಳಿಗೆ ತ್ವರಿತವಾಗಿ ಸ್ಪಂದಿಸಬೇಕು. ಪಡಿತರ ವಿತರಣೆಯಲ್ಲಿ ಲೋಪದೋಷಗಳು ಕಂಡುಬಂದಲ್ಲಿ ಸಂಬಂಧಿಸಿದವರ ವಿರುದ್ಧ ಮುಲಾಜಿಲ್ಲದೇ ಕ್ರಮ ಕೈಗೊಳ್ಳಲಾಗುವುದೆಂದು ಶಾಸಕರು ಹೇಳಿದರು.

ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿ ಅಗತ್ಯ ಪರಿಹಾರ ಕಲ್ಪಿಸಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳ ಲಾಭ ನೇರವಾಗಿ ಬಡ ಮತ್ತು ಶ್ರಮಿಕ ವರ್ಗದವರಿಗೆ ತಲುಪಬೇಕು ಎಂಬ ಉದ್ದೇಶದಿಂದ ಗ್ರಾಮ ಸಂಚಾರ ನಡೆಸುತ್ತಿದ್ದು, ಸರ್ಕಾರದ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಜವಾಬ್ದಾರಿ ಅಧಿಕಾರಿಗಳ ಮೇಲಿದ್ದು, ಜವಾಬ್ದಾರಿ ಯಿಂದ ಕೆಲಸ ಮಾಡಬೇಕು. ಸಾರ್ವಜನಿಕರಿಗೆ ಯಾವುದೇ ರೀತಿಯ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕೆಂದು ಹೇಳಿದರು.

ಇದೇ ವೇಳೆ ಗ್ರಾಮಸ್ಥರಿಂದ ವಿದ್ಯುತ್, ಬಸ್ ವ್ಯವಸ್ಥೆ, ಹೊಲಗಳಿಗೆ ದಾರಿ, ಪಿಂಚಣಿ, ವಿಧವಾ ವೇತನ ಸೇರಿದಂತೆ ವಿವಿಧ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರರಾದ ಅಮಿತ ಕುಲಕರ್ಣಿ, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾಯ ಕೌಟಗೆ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಗಾಯತ್ರಿ, ಲೋಕೋಪಯೋಗಿ ಉಲಾಖೆ ಎಇಇ ಪ್ರೇಮಸಾಗರ, ಪಂಚಾಯತ ರಾಜ್ ಎಂಜಿನಿಯರಿಂಗ್ ಇಲಾಖೆ ಎಇಇ ಸುನೀಲ ಚಿಲ್ಲರ್ಗೆ, ಜೆಸ್ಕಾಂ ಎಇಇ ರವಿ ಕಾರಬಾರಿ, ಸಹಾಯಕ ಕೃಷಿ ನಿರ್ದೇಶಕ ಧೂಳಪ್ಪ ಮುಖಂಡರಾದ ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಸುರೇಶ ಬೋಸ್ಲೆ, ಅರಹಂತ ಸಾವಳೆ, ಶಿವರಾಜ ಅಲ್ಮಾಜೆ, ಗಿರೀಶ ವಡೆಯರ್, ಬಾಬುರಾವ ತೋರ್ಣಾವಾಡಿ, ರಾಹುಲ ಪಾಟೀಲ, ವಿಷ್ಣು, ಭರತ ಕದಂ, ಅಶೋಕ ಮೇತ್ರೆ, ಉದಯ ಸೋಲಾಪೂರೆ, ಗಜಾನಂದ ವಟಗೆ, ಪ್ರವೀಣ ಸಿಗ್ರೆ, ಶಾಂತಕುಮಾರ ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

ವಿಜೃಂಭಣೆಯಿಂದ ಗಣರಾಜ್ಯೋತ್ಸವ ಆಚರಣೆಗೆ ನಿರ್ಧಾರ: ಸಕಲ ಸಿದ್ಧತೆ ಕೈಗೊಳ್ಳುವಂತೆ ಅಧಿಕಾರಿಗಳಗೆ ಡಿ.ಸಿ. ಸೂಚನೆ



ಕಲಬುರಗಿ,ಜ.17-

ಕಲಬುರಗಿ ಜಿಲ್ಲೆಯಾದ್ಯಂತ ಇದೇ ಜನವರಿ 26 ರಂದು 77ನೇ ಗಣರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮ ಅತ್ಯಂತ ವಿಜೃಂಭಣೆಯಿಂದ ಆಯೋಜಿಸಲು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರ ಅಧ್ಯಕ್ಷತೆಯಲ್ಲಿ ಶುಕ್ರವಾರ ನಡೆದ ಪೂರ್ವಭಾವಿ ಸಭೆಯಲ್ಲಿ ನಿರ್ಧರಿಸಲಾಯಿತು.

ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿದ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಜನವರಿ 26 ರಂದು ಬೆಳಿಗ್ಗೆ 9 ಗಂಟೆಗೆ ಕಲಬುರಗಿ ನಗರದ ಡಿ.ಎ.ಆರ್. ಪೊಲೀಸ್ ಪರೇಡ್ ಮೈದಾನದಲ್ಲಿ ಜಿಲ್ಲಾಡಳಿತದಿಂದ ಜರುಗುವ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ರಾಷ್ಟ್ರಧ್ವಜಾರೋಹಣ ಮಾಡಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡುವರು. ಶಿಷ್ಠಾಚಾರದಂತೆ ಎಲ್ಲಾ ಚುನಾಯಿತ ಪ್ರತಿನಿಧಿಗಳನ್ನು ಆಹ್ವಾನಿಸಬೇಕು ಮತ್ತು ದಿನಾಚರಣೆಗೆ ಸಕಲ ಪೂರ್ವಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಪೊಲೀಸ್ ಪರೇಡ್ ಮೈದಾನದಲ್ಲಿ ಶಾಲಾ ಮಕ್ಕಳು, ಸಾರ್ವಜನಿಕರು, ಅಧಿಕಾರಿ ಸಿಬ್ಬಂದಿಗಳು ಭಾಗವಹಿಸುವುದರಿಂದ ಎಲ್ಲೆಡೆ ಸ್ವಚ್ಛತೆ ಕಾಪಾಡಬೇಕು. ವಿದ್ಯುತ್ ವ್ಯತ್ಯಯವಾಗದಂತೆ ಎಚ್ಚರ ವಹಿಸಬೇಕು. ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ, ಮಕ್ಕಳಿಗೆ ಸಿಹಿ ಪೊಟ್ಟಣ ವಿತರಿಸಬೇಕು. ಗಣ್ಯರು ಆಗಮಿಸುವುದರಿಂದ ಅಗತ್ಯ ಪೊಲೀಸ್ ಭದ್ರತೆ ಕಲ್ಪಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಜಿಲ್ಲಾಧಿಕಾರಿಗಳು, ಗಣರಾಜ್ಯೋತ್ಸವ ಅಂಗವಾಗಿ ಕಲಬುರಗಿ ನಗರದ ಅಪ್ಪ ಕೆರೆ ಉದ್ಯಾನವನದಲ್ಲಿ ಮೂರು ದಿನಗಳ ಕಾಲ ಪುಷ್ಪ ಪ್ರದರ್ಶನ ಆಯೋಜಿಸುವಂತೆ ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಸಂತೋಷ ಇನಾಂದಾರ ಅವರಿಗೆ ಸೂಚನೆ ನೀಡಿದರು.

ಎನ್.ಸಿ.ಸಿ., ಸ್ಕೌಟ್ ಮತ್ತು ಗೈಡ್ಸ್, ಭಾರತ ಸೇವಾದಳ ಸೇರಿದಂತೆ ಪೊಲೀಸ್ ಇಲಾಖೆಯ ವಿವಿಧ ತುಕಡಿಗಳಿಂದ ಆಕರ್ಷಕ ಪಥಸಂಚಲನ ಮತ್ತು ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಬೇಕು. ಇನ್ನು ವಿವಿಧ ಇಲಾಖೆಯ ಶಂಕುಸ್ಥಾಪನೆ, ಉದ್ಘಾಟನೆ ಹಾಗೂ ಸರ್ಕಾರಿ ಸೌಲಭ್ಯ ವಿತರಣೆ ಮಾಡುವುದಾದರೆ ಶನಿವಾರ ಸಂಜೆಯೊಳಗೆ ಇಲಾಖೆಗಳು ಜಿಲ್ಲಾಡಳಿತಕ್ಕೆ ಮಾಹಿತಿ ನೀಡಬೇಕೆಂದು ಸೂಚಿಸಲಾಯಿತು.

ಸ್ತಬ್ಧಚಿತ್ರ ಪ್ರದರ್ಶನ ಯೋಜಿಸಬೇಕು: ಕೃಷಿ, ತೋಟಗಾರಿಕೆ, ಆರೋಗ್ಯ, ಜೆಸ್ಕಾಂ, ಕೆ.ಕೆ.ಆರ್.ಟಿ.ಸಿ., ಸಮಾಜ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ, ಜಿಲ್ಲಾ ಪಂಚಾಯತ್ ಕಚೇರಿಯಿಂದ ವಿವಿಧ ವಿಷಯಾಧಾರಿತ ಆಕರ್ಷಕ ಸ್ತಬ್ಧಚಿತ್ರಗಳನ್ನು ಆಯೋಜಿಸಬೇಕೆಂದು ಇದೇ ಸಂದರ್ಭದಲ್ಲಿ ಸಂಬಂಧಪಟ್ಟ ಇಲಾಖೆಯ ಮುಖ್ಯಸ್ಥರಿಗೆ ಡಿ.ಸಿ. ಸೂಚನೆ ನೀಡಿದರು.

ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಮಾತನಾಡಿ, ಗಣರಾಜ್ಯೋತ್ಸವ ಹಿನ್ನೆಲೆಯಲ್ಲಿ ಕಲಬುರಗಿ ನಗರದ ಸರ್ದಾರ್ ವಲ್ಲಭಭಾಯಿ ಪಟೇಲ್, ಮಹಾತ್ಮ ಗಾಂಧೀಜಿ, ಡಾ. ಬಿ.ಆರ್ ಅಂಬೇಡ್ಕರ್, ಸಾಂಸ್ಕೃತಿಕ ನಾಯಕ ಬಸವಣ್ಣ, ಸಂಗೊಳ್ಳಿ ರಾಯಣ್ಣ, ಡಾ. ಬಾಬು ಜಗಜೀವನರಾಮ್ ಅವರ ಪ್ರತಿಮೆಗಳನ್ನು ಸ್ವಚ್ಛಗೊಳಿಸಿ ದೀಪಾಲಂಕಾರದ ವ್ಯವಸ್ಥೆ ಮಾಡಬೇಕು ಎಂದು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ತಿಳಿಸಿದರು.

ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ ಮಾತನಾಡಿ, ಭವಿಷ್ಯದಲ್ಲಿನ ಕಲಬುರಗಿ ನಗರ ಬೆಳವಣಿಗೆ ಕುರಿತು ಶಾಲಾ ಮಕ್ಕಳಿಂದ ಚಿತ್ರಸ್ಪರ್ಧೆ ಆಯೋಜಿಸಬೇಕು. ಸ್ಪರ್ಧಾಳುಗಳ ಬಿಡಿಸದ ಚಿತ್ರಗಳನ್ನು ಪರೇಡ್ ಮೈದಾನದಲ್ಲಿ ಪ್ರದರ್ಶಿಸಿದಲ್ಲಿ ಮಕ್ಕಳಿಗೆ ಅದುವೇ ಸ್ಫೂರ್ತಿಯಾಗಲಿದೆ ಎಂದರು.

ಸಭೆಯಲ್ಲಿ ಹೆಚ್ಚುವರಿ ಎಸ್.ಪಿ. ಮಹೇಶ ಮೇಘಣ್ಣನವರ್, ಮಹಾನಗರ ಪಾಲಿಕೆ ಉಪ ಆಯುಕ್ತೆ (ಆಡಳಿತ) ಪ್ರಮೀಳಾ ಎಂ.ಕೆ. ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ಶೈಕ್ಷಣಿಕ ಶುಲ್ಕ ಮರುಪಾವತಿ ಯೋಜನೆಯಡಿ ಅರ್ಜಿ ಆಹ್ವಾನ

ಬೀದರ,ಜ.17-

2025-26ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಎನ್.ಐ.ಎಸ್. ತರಬೇತಿ ಪಡೆಯುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಶುಲ್ಕ ವನ್ನು ಮರುಪಾವತಿಸುವ ಯೋಜ ನೆಯನ್ನು ಅನುಷ್ಠಾನಗೊಳಿಸಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಗಳನ್ನು ಅಹ್ವಾನಿಸಲಾಗಿದೆ ಎಂದು ಬೀದರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಯುಕ್ತ ಪರಿಶಿಷ್ಟ ಜಾತಿಯ ಅರ್ಹ ವಿದ್ಯಾರ್ಥಿಗಳು ಸಹಾಯಕ ನಿರ್ದೇಶಕರವರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಕ್ರೀಡಾಂಗಣ, ಬೀದರ ಕಛೇರಿಗೆ ಭೇಟಿ ನೀಡಿ, ಅರ್ಜಿ ನಮೂನೆ ಪಡೆದು ದಿನಾಂಕ: 01-02-2026 ರೊಳಗಾಗಿ ಭರ್ತಿ ಮಾಡಿ ಬೀದರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿಗೆ ಸಲ್ಲಿಸುವಂತೆ ಅವರು ತಿಳಿಸಿದ್ದಾರೆ.

ಶೈಕ್ಷಣಿಕ ಶುಲ್ಕ ಮರುಪಾವತಿ ಯೋಜನೆಯಡಿ ಅರ್ಜಿ ಆಹ್ವಾನ

ಬೀದರ,ಜ.17-

2025-26ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಎನ್.ಐ.ಎಸ್. ತರಬೇತಿ ಪಡೆಯುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಶುಲ್ಕ ವನ್ನು ಮರುಪಾವತಿಸುವ ಯೋಜ ನೆಯನ್ನು ಅನುಷ್ಠಾನಗೊಳಿಸಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಗಳನ್ನು ಅಹ್ವಾನಿಸಲಾಗಿದೆ ಎಂದು ಬೀದರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಯುಕ್ತ ಪರಿಶಿಷ್ಟ ಜಾತಿಯ ಅರ್ಹ ವಿದ್ಯಾರ್ಥಿಗಳು ಸಹಾಯಕ ನಿರ್ದೇಶಕರವರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಕ್ರೀಡಾಂಗಣ, ಬೀದರ ಕಛೇರಿಗೆ ಭೇಟಿ ನೀಡಿ, ಅರ್ಜಿ ನಮೂನೆ ಪಡೆದು ದಿನಾಂಕ: 01-02-2026 ರೊಳಗಾಗಿ ಭರ್ತಿ ಮಾಡಿ ಬೀದರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿಗೆ ಸಲ್ಲಿಸುವಂತೆ ಅವರು ತಿಳಿಸಿದ್ದಾರೆ.

ನೆರವಿನ ಕೈ ಹಿಡಿದುಧೈರ್ಯ ನೀಡಿದ ಸಮಿತಿ, ಕಣ್ಣೀರಿಟ್ಟ ಫುಲುಬಾಯಿ

ಫುಲುಬಾಯಿಗೆ ಬೆಂಕಿ ಆಘಾತ, ಬೊಮ್ಮಗೊಂಡೇಶ್ವರ ಸಮಿತಿ ನೆರವು



ಔರಾದ್,ಜ.17-

ಆದರ್ಶ ವಿದ್ಯಾಲಯದ ಸಮೀಪ ವಾಸವಿದ್ದಅಲೆಮಾರಿ ಸಮುದಾಯದ ಫುಲುಬಾಯಿ ಹಿಮತ್ ವಾಘಮಾರೆ ಅವರಗುಡಿಸಲು ಮನೆಗೆ ಈಚೆಗೆ ಸಂಭವಿಸಿದ ಆಕಸ್ಮಿಕ ಅಗ್ನಿಅವಘಡದಲ್ಲಿ ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿದೆ. ಈ ದುರ್ಘಟನೆಯಲ್ಲಿ ಗುಡಿಸಲಿನಲ್ಲಿದ್ದದವಸ ಧಾನ್ಯಗಳು, ಬಟ್ಟೆಬರೆ ಸೇರಿದಂತೆ ಬದುಕಿನ ಅವಲಂಬನೆಯಾಗಿದ್ದಎಲ್ಲಾ ವಸ್ತುಗಳು ನಾಶವಾಗಿವೆ. ಅಲ್ಲದೆ, ಮಗನ ಮದುವೆಗಾಗಿಕಷ್ಟಪಟ್ಟು ಸಂಗ್ರಹಿಸಿಟ್ಟಿದ್ದ ಸುಮಾರು 55 ಸಾವಿರರೂಪಾಯಿ ನಗದು ಹಣವೂ ಬೆಂಕಿಗೆ ಆಹುತಿಯಾಗಿದೆಎಂದು ಸ್ಥಳೀಯರು ತಿಳಿಸಿದ್ದಾರೆ.

ಸರ್ವಸ್ವ ಕಳೆದುಕೊಂಡು ಬೆಂಕಿಯ ಬೂದಿಯಲ್ಲಿ ಬದುಕು ಹುಡುಕುತ್ತಿರುವ ಫುಲುಬಾಯಿಕುಟುಂಬದ ದುಸ್ಥಿತಿಯನ್ನು ಮನಗಂಡು, ಸಾಮಾಜಿಕಚಿಂತಕ ಮಾಳಪ್ಪ ಅಡಸಾರೆಅವರ ಮಾರ್ಗದರ್ಶನದಲ್ಲಿ ಬೀದರಿನ ಮಹಾತ್ಮ ಬೊಮ್ಮಗೊಂಡೇಶ್ವರ ಸೇವಾ ಸಮಿತಿಯ ಸದಸ್ಯರು ಬುಧವಾರ ಸ್ಥಳಕ್ಕೆ ಭೇಟಿ ನೀಡಿ ಮಾನವೀಯ ನೆರವು ಒದಗಿಸಿದರು. ಸಮಿತಿಯವರು ಸಂತ್ರಸ್ತಕುಟುಂಬಕ್ಕೆ ಹಾಸಿಗೆ, ಹೊದಿಕೆಗಳು (ಬ್ಲ್ಯಾಂಕೆಟ್), ಸೀರೆಗಳು, ಅಡುಗೆ ಹಾಗೂ ಊಟಕ್ಕೆಅಗತ್ಯವಿರುವ ಪಾತ್ರೆಗಳು, 25 ಕೆಜಿ ಅಕ್ಕಿ, 5 ಗೋಧಿ ಹಿಟ್ಟಿನ ಪ್ಯಾಕೆಟ್‌ಗಳು, ಸಕ್ಕರೆ, ಎಣ್ಣೆ, ಮಸಾಲಾ, ಉಪ್ಪು, ಖಾರಾ ಸೇರಿದಂತೆ ಸಂಪೂರ್ಣಆಹಾರ ಕಿಟ್‌ಗಳನ್ನು ವಿತರಿಸಿದರು. ಈ ವೇಳೆ ನೀವು ಒಂಟಿಯಾಗಿಲ್ಲ. ಯಾವುದೇಕಾರಣಕ್ಕೂ ಹೆದರಬೇಡಿ. ನಿಮ್ಮಜೊತೆಗೆ ನಾವು ಇದ್ದೇವೆಎಂದು ಸಮಿತಿ ಸದಸ್ಯರು ಫುಲುಬಾಯಿಅವರಿಗೆ ಧೈರ್ಯ ತುಂಬಿದರು.

ನೆರವಿನ ಸಾಮಗ್ರಿಗಳನ್ನು ಸ್ವೀಕರಿಸಿದ ಫುಲುಬಾಯಿ, ನನಗೆ ಸಂಬಂಧಿಕರೂಇಲ್ಲ, ಕುಟುಂಬಸ್ಥರೂಇಲ್ಲ. ಆದರೆ ನೀವು ನನಗೆ ಕುಟುಂಬದಂತೆ ನೆರವಿಗೆ ಬಂದಿದ್ದೀರಿ ಎಂದು ಕಣ್ಣೀರಿಟ್ಟ ಪ್ರಸಂಗ ನಡೆಯಿತು. ಚಳಿಗಾಲದ ಈ ಸಂದರ್ಭದಲ್ಲಿತಲೆಯ ಮೇಲೆ ಸೂರುಇಲ್ಲದೆ, ಆಹಾರವಿಲ್ಲದೆಕುಟುಂಬ ತೀವ್ರ ಸಂಕಷ್ಟಕ್ಕೆ ಸಿಲುಕಿತ್ತು. ಈ ದುಸ್ಥಿತಿಯನ್ನು ಮನಗಂಡು ಮಾನವೀಯತೆಯಿಂದ ನೆರವಿನ ಕೈ ಚಾಚಲಾಗಿದೆ ಎಂದು ಮಹಾತ್ಮ ಬೊಮ್ಮಗೊಂಡೇಶ್ವರ ಸೇವಾ ಸಮಿತಿಯ ಪ್ರಮುಖರಾದ ಕಲ್ಯಾಣರಾವ ಅಡಸಾರೆ ತಿಳಿಸಿದರು. ಈ ಸಂದರ್ಭದಲ್ಲಿ ಸಮಿತಿ ಸದಸ್ಯರಾದಚಂದ್ರಕಾಂತ ಭತಮುರಗೆ, ಜಗನ್ನಾಥ ಮೇತ್ರೆ, ಪ್ರಭು ಚಿಂಚೋಳಿಕರ್, ಧನರಾಜಗುರಮೆ, ನ್ಯಾಯವಾದಿ ಸಂಘದ ಮಾಜಿಅಧ್ಯಕ್ಷ ಸಂದೀಪ ಮೇತ್ರೆ, ಗೊಂಡ ಸಮಾಜದಅಧ್ಯಕ್ಷ ಬಂಡೆಪ್ಪಕೋಟೆ, ಬಾಲಾಜಿ ಭಾಲೇಕರ್, ರತ್ನದೀಪಕಸ್ತೂರೆ, ರೋಹಿತ ಕಾಂಬಳೆ ಸೇರಿದಂತೆಅನೇಕರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಬರಪೀಡಿತ ಜಿಲ್ಲೆಯ ಜನರ ಜಲಾಗ್ರಹದ ಕೂಗು ಕೇಳಿಸುವುದೇ ಸರ್ಕಾರಕ್ಕೆ?



24 ಸಾವಿರ ಕೋಟಿಯ ಎತ್ತಿನಹೊಳೆ, 6 ಸಾವಿರ ಕೋಟಿಯ ತ್ಯಾಜ್ಯ ಸಂಸ್ಕರಿತ ನೀರಿನ ವ್ಯಾಲಿ ಯೋಜನೆ- ಎರಡರಿಂದಲೂ ಬರಪೀಡಿತ ಜಿಲ್ಲೆಗಳ ಜನರ ನೀರಿನ ಬವಣೆ ನೀಗಿಲ್ಲ. ಎರಡೂ ಯೋಜನೆಗಳ ಹೊಣೆ ಹೊರುವವರು ಯಾರು? ಈ ಕುರಿತು ತನಿಖೆಯಾಗಲಿ, ತಪ್ಪಿತಸ್ಥರಿಗೆ ಶಿಕ್ಷೆಯಾಗಲಿ ಎನ್ನುವುದು ಜಲಾಗ್ರಹ ಹೋರಾಟಗಾರರ ಒಕ್ಕೊರಲಿನ ಆಗ್ರಹವಾಗಿದೆ.

ಬಯಲು ಸೀಮೆಯ ಬರಪೀಡಿತ ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ಜನ ಜನವರಿ 17ರಂದು ಕೋಲಾರದಲ್ಲಿ ಜಲಾಗ್ರಹ ಸಮಾವೇಶವನ್ನು ಹಮ್ಮಿಕೊಂಡಿದ್ದಾರೆ. ಈ ಸಮಾವೇಶದ ಮುಖ್ಯ ಬೇಡಿಕೆ- ಶುದ್ಧ ಕುಡಿಯುವ ನೀರು ಮತ್ತು ಅಂತರ್ಜಲ ಅಭಿವೃದ್ಧಿ. ಹಾಗೆಯೇ ಇಲ್ಲಿಯವರೆಗೆ ಸರ್ಕಾರ ಕೈಗೆತ್ತಿಕೊಂಡ ಯೋಜನೆಗಳ ವೈಫಲ್ಯ ಕುರಿತು ತನಿಖೆಯ ಆಗ್ರಹವಾಗಿದೆ.

ಮೇಲಿನ ಮೂರು ಜಿಲ್ಲೆಗಳಲ್ಲಿ ನದಿ ನಾಲೆಗಳಿಲ್ಲ, ಕೆರೆ ಕುಂಟೆಗಳೂ ಬತ್ತಿಹೋಗಿವೆ. ಹಾಗಾಗಿ ಶುದ್ಧ ಕುಡಿಯುವ ನೀರು ಸಿಗದಾಗಿದೆ. ಮಳೆಯಾಶ್ರಿತ ಬೇಸಾಯ ನಂಬಿ ಬದುಕುವ ರೈತರು ಮಳೆಯೊಂದಿಗೆ ಜೂಜಾಟಕ್ಕಿಳಿಯಬೇಕಾಗಿದೆ. ಆರ್ಥಿಕವಾಗಿ ಕೊಂಚ ಸದೃಢರಾದ ರೈತರು ಕೊಳವೆಬಾವಿ ಕೊರೆಸಲು ಮುಂದಾದರೆ, ಕನಿಷ್ಠ 1500 ಅಡಿ ಆಳದವರೆಗೆ ಕೊರೆಸುವ ಅನಿವಾರ್ಯತೆಗೆ ಸಿಲುಕಿದ್ದಾರೆ.

ಅಂತರ್ಜಲ ಪಾತಾಳಕ್ಕೆ ಕುಸಿದಿರುವ ಈ ದಿಕ್ಕೆಟ್ಟ ದಿನಗಳಲ್ಲಿ, ನೀರು ಸಿಗಬಹುದು, ಸಿಗದಿರಲೂಬಹುದು. ಸಿಕ್ಕರೆ ಎಲ್ಲಿಯವರೆಗೆ ಎಂಬ ಬಗ್ಗೆ ಗ್ಯಾರಂಟಿ ಇಲ್ಲ. ಅದನ್ನೂ ಮೀರಿ ಅಕಸ್ಮಾತ್ ಸಿಕ್ಕರೆ ಆ ನೀರು ಕೃಷಿಗೂ-ಕುಡಿಯುವುದಕ್ಕೂ ಯೋಗ್ಯವಲ್ಲ. ಏಕೆಂದರೆ, 1500 ಅಡಿ ಆಳದಲ್ಲಿ ಸಿಗುವ ನೀರಿನಲ್ಲಿ ಫ್ಲೋರೈಡ್ ಮತ್ತು ನೈಟ್ರೇಟ್ ಗಳ ಜೊತೆಗೆ ಅಪಾಯಕಾರಿ ಯುರೇನಿಯಂ ಪತ್ತೆಯಾಗಿದೆ. ಇದು ವೈಜ್ಞಾನಿಕ ಸಂಶೋಧನಾ ಸಂಸ್ಥೆಗಳ ಅಧ್ಯಯನದಿಂದ ದೃಢಪಟ್ಟಿದೆ. ಈ ನೀರಿನಿಂದ ಬೆಳೆಯುವ ಬೆಳೆಗಳು ವಿಷಪೂರಿತವಾಗಿದ್ದು, ಇದನ್ನು ಬಳಸುವ ಜನ ಮತ್ತು ಜಾನುವಾರುಗಳು ಮಾರಣಾಂತಿಕ ಖಾಯಿಲೆಗಳು ತುತ್ತಾಗುತ್ತಿದ್ದಾರೆ.

ದಿನದಿಂದ ದಿನಕ್ಕೆ ಬಯಲು ಸೀಮೆಯ ಜನರ ಶುದ್ಧ ಕುಡಿಯುವ ನೀರಿನ ದಾಹ ಏರುತ್ತಲೇ ಇದೆ. ಸಮಸ್ಯೆಯೂ ಬಿಗಡಾಯಿಸುತ್ತಿದೆ. ಇಂತಹ ಸಂದರ್ಭದಲ್ಲಿ ಈ ಜಿಲ್ಲೆಗಳ ಜನರ ದಾಹ ಇಂಗಿಸಲು ಮುಂದಾಗಬೇಕಾದ್ದು ಜವಾಬ್ದಾರಿಯುತ ಸರ್ಕಾರದ ಕರ್ತವ್ಯ. ಜಂಜಾಟದಲ್ಲಿರುವ ಜನರ ನೆರವಿಗೆ ನಿಲ್ಲಬೇಕಾದ್ದು ಜನಪ್ರತಿನಿಧಿಗಳ ಜವಾಬ್ದಾರಿ. ಆದರೆ, ಜನರ ನೆರವಿಗೆ ನಿಲ್ಲುವುದನ್ನೇ ನೆಪವಾಗಿಸಿಕೊಳ್ಳುವ ಅಧಿಕಾರಸ್ಥರು ಬೃಹತ್ ಯೋಜನೆಗಳಿಗೆ ಕೈಹಾಕುತ್ತಾರೆ. ಕೋಟ್ಯಂತರ ರೂಪಾಯಿಗಳ ಕಾಮಗಾರಿಯ ಕನಸು ಕಾಣುತ್ತಾರೆ.

ಅಂತಹ ಕನಸಿನ ಬೃಹತ್ ಯೋಜನೆಯೇ ಎತ್ತಿನಹೊಳೆ ಯೋಜನೆ. ಏಳು ಜಿಲ್ಲೆಗಳಿಗೆ ಸುರಕ್ಷಿತ ಕುಡಿಯುವ ನೀರು ಒದಗಿಸುವ ಹಾಗೂ ಅಂತರ್ಜಲ ಮರುಪೂರಣಕ್ಕಾಗಿ ಸುಮಾರು 527 ಕೆರೆಗಳಿಗೆ ನೀರು ತುಂಬಿಸುವ ಉದ್ದೇಶ ಹೊಂದಿತ್ತು ಎತ್ತಿನಹೊಳೆ ಯೋಜನೆ. 2014ರಲ್ಲಿ ಚಿಕ್ಕಬಳ್ಳಾಪುರದಲ್ಲಿ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಯಮ್ಮನವರು, ಎತ್ತಿನಹೊಳೆ ಯೋಜನೆಯಿಂದ 24 ಟಿಎಂಸಿ ನೀರು ಸಿಗಲಿದೆ. ಮುಂದಿನ ಎರಡು ವರ್ಷದಲ್ಲಿ ಬಯಲು ಸೀಮೆಯ ಜಿಲ್ಲೆಗಳಿಗೆ ನೀರು ಹರಿಯಲಿದೆ ಎಂದಿದ್ದರು.

ಅದಾಗಿ ಇಂದಿಗೆ 11 ವರ್ಷಗಳು ಕಳೆದುಹೋಗಿವೆ. ಭರದಿಂದ ಕಾಮಗಾರಿ ನಡೆದಿದೆ. ಅದಕ್ಕಾಗಿ ಆಡಳಿತ ಯಂತ್ರಾಂಗ ವಿನಿಯೋಗವಾಗಿದೆ. ಅದರ ನೆಪದಲ್ಲಿ ಪಶ್ಚಿಮಘಟ್ಟ ನಾಶವಾಗಿದೆ. ಅಂದಾಜುವೆಚ್ಚ 24ರಿಂದ 36 ಸಾವಿರ ಕೋಟಿಗೆ ಜಿಗಿದಿದೆ. ಮತ್ತೊಮ್ಮೆ ಸಿದ್ದರಾಮಯ್ಯನವರೇ ಮುಖ್ಯಮಂತ್ರಿಗಳಾಗಿದ್ದಾರೆ. ಆದರೆ, ಎತ್ತಿನಹೊಳೆಯಿಂದ ಎತ್ತುವ ನೀರು 24 ಟಿಎಂಸಿಯಿಂದ 8.4 ಟಿಎಂಸಿಗೆ ಇಳಿದಿದೆ. ಕೇವಲ 5 ಟಿಎಂಸಿ ನೀರು ಮಾತ್ರ ಲಭ್ಯವಾಗಿದೆ. ಅದು ಹಾಸನ ದಾಟಿ ತುಮಕೂರಿನತನಕವೂ ಹರಿಯದಾಗಿದೆ. ಕೋಲಾರ, ಚಿಕ್ಕಬಳ್ಳಾಪುರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಹರಿಯುವ ಸೂಚನೆಯೂ ಇಲ್ಲವಾಗಿದೆ.

ಹಾಗಾದರೆ, ಈ ಮೂರು ಜಿಲ್ಲೆಗಳ ಜನರ ಕುಡಿಯುವ ನೀರಿನ ಬವಣೆ ನೀಗುವುದು ಹೇಗೆ? ಸರ್ಕಾರ ಮತ್ತೊಂದು ಯೋಜನೆ- ತ್ಯಾಜ್ಯ ನೀರು ಸಂಸ್ಕರಣಕ್ಕೆ ಕೈಹಾಕಿತು. ಕೋಲಾರಕ್ಕೆ ಕೆಸಿ ವ್ಯಾಲಿ, ಚಿಕ್ಕಬಳ್ಳಾಪುರಕ್ಕೆ ಎಚ್‌ಎನ್ ವ್ಯಾಲಿ, ಬೆಂಗಳೂರು ಗ್ರಾಮಾಂತರಕ್ಕೆ ವೃಷಭಾವತಿ ವ್ಯಾಲಿ. ಮೂರು ಜಿಲ್ಲೆಯ ಅಂತರ್ಜಲ ಮರುಪೂರಣ ಮಾಡುವ ನೆಪದಲ್ಲಿ ಬೆಂಗಳೂರು ನಗರದ ಕೊಳಚೆ ನೀರನ್ನು ಶುದ್ಧೀಕರಿಸಿ 200 ಕೆರೆಗಳಿಗೆ ಹರಿಸುವ ಯೋಜನೆ ರೂಪಿಸಿತು. ಅದಕ್ಕಾಗಿ 6 ಸಾವಿರ ಕೋಟಿ ಖರ್ಚು ಮಾಡಲಾಯಿತು. ಲಗುಬಗೆಯಿಂದ ಕಾಮಗಾರಿ ಕೈಗೆತ್ತಿಕೊಂಡು ಮಾಡಿ ಮುಗಿಸಿದ್ದೂ ಆಯಿತು. ನೀರೂ ಕೂಡ ಹರಿಯಿತು. ಆದರೆ, ಆ ಸಂಸ್ಕರಿತ ನೀರು ಕುಡಿಯುವುದು ಹೋಗಲಿ, ಬೆಳೆಗಳಿಗೆ ಬಳಸಲೂ ಯೋಗ್ಯವಿಲ್ಲದಾಯಿತು. ಕೊಳವೆಬಾವಿ ನೀರನ್ನೂ ಕಲುಷಿತಗೊಳಿಸಿತು.

ನೀರಿನ ದಾಹದಿಂದ ಬರಗೆಟ್ಟ ಬಯಲುನಾಡಿಗೆ ಸಂಜೀವಿನಿ ಆಗಬೇಕಿದ್ದ ವ್ಯಾಲಿ ಯೋಜನೆಗಳು ಈಗ ನಿಧಾನವಾಗಿ ವಿಷ ಉಣಿಸುತ್ತಿವೆ. ಅರೆ ಸಂಸ್ಕರಿತ ನೀರಿನಿಂದ ಬೆಳೆದ ತರಕಾರಿ ಜನರ ಒಡಲು ಸೇರಿ ಆತಂಕ ಸೃಷ್ಟಿಸುತ್ತಿದೆ. ಈಗ ಬೆಳೆಯುತ್ತಿರುವ ತರಕಾರಿ, ಸೊಪ್ಪಿನ ರುಚಿ, ಬಣ್ಣ ಬದಲಾಗಿದೆ. ಮೊದಲಿನ ಗುಣಮಟ್ಟ ಕಾಯ್ದುಕೊಳ್ಳಲು ಆಗುತ್ತಿಲ್ಲ. ವರ್ತಕರು ಇದೇ ಕಾರಣ ನೀಡಿ ಖರೀದಿಸಲು ಹಿಂಜರಿಯುತ್ತಿದ್ದಾರೆ. ಏನು ಮಾಡುವುದು ತೋಚುತ್ತಿಲ್ಲ ಎನ್ನುವುದು ರೈತರ ಅಳಲಾಗಿದೆ.

ಅಂತರ್ಜಲ ಮರುಪೂರಣಕ್ಕಾಗಿ ಮಹಾನಗರಗಳ ಕೊಳಚೆ ನೀರು ಬಳಸಿಕೊಳ್ಳುವ ಬಗ್ಗೆ 2013ರಲ್ಲಿಯೇ ಕೇಂದ್ರ ಸರ್ಕಾರ ದೇಶಕ್ಕೆ ಅನ್ವಯವಾಗುವ ನಿಯಮ ರೂಪಿಸಿದೆ. ಆ ಮಾನದಂಡದ ಪ್ರಕಾರ ಚರಂಡಿಯ ಕೊಳಚೆ ನೀರನ್ನು ಮೂರು ಹಂತದಲ್ಲಿ ಶುದ್ಧೀಕರಿಸಿಯೇ ಕೆರೆಗಳಿಗೆ ಹರಿಸಬೇಕು. ಹಾಗಾದರೆ ಮಾತ್ರ ಪ್ರಾಣಿ, ಪಕ್ಷಿಗಳು, ಮನುಷ್ಯನಿಗೆ ಯಾವುದೇ ತೊಂದರೆ ಆಗುವುದಿಲ್ಲ. ಇಲ್ಲದಿದ್ದರೆ ಅರೆ ಸಂಸ್ಕರಿತ ನೀರು ಅಂತರ್ಜಲಕ್ಕೆ ಆಪತ್ತು ತರಲಿದೆ ಎಂದು ಎಚ್ಚರಿಸಲಾಗಿದೆ. ಈ ಬಗ್ಗೆ ಶಾಶ್ವತ ನೀರಾವರಿ ಹೋರಾಟಗಾರರು, ವಿಜ್ಞಾನಿಗಳು, ವೈದ್ಯರು, ಪರಿಸರವಾದಿಗಳು ಈ ಯೋಜನೆಯ ಆರಂಭದಲ್ಲಿಯೇ ಎಚ್ಚರಿಸಿದ್ದರು. ವಿವಿಧ ಸಂಸ್ಥೆಗಳು ವೈಜ್ಞಾನಿಕ ವರದಿಗಳನ್ನು ಸಹ ಸರ್ಕಾರಕ್ಕೆ ಸಲ್ಲಿಸಿದ್ದವು.

ಆದರೆ, ಕಾಮಗಾರಿಯ ಧಾವಂತಕ್ಕೆ ಬಿದ್ದ ಅಧಿಕಾರಸ್ಥ ರಾಜಕಾರಣಿಗಳು-ಅಧಿಕಾರಿಗಳು-ಗುತ್ತಿಗೆದಾರರು ಆ ಮಾನದಂಡಗಳನ್ನು ಮೂಲೆಗೆಸೆದರು. ಕಾಮಗಾರಿ ಮುಗಿಸಿ ಅದ್ದೂರಿ ಸಮಾರಂಭವೇರ್ಪಡಿಸಿ, ನೀರು ಕೊಟ್ಟಿದ್ದೇವೆ ಎಂದು ಕೊಚ್ಚಿಕೊಂಡರು. ಇದರಿಂದಾದ ದುಷ್ಪರಿಣಾಮಗಳನ್ನು ಅಧ್ಯಯನ ನಡೆಸಿದ ಶಾಶ್ವತ ನೀರಾವರಿ ಹೋರಾಟ ಸಮಿತಿ ಅಧ್ಯಕ್ಷ ಆರ್. ಆಂಜನೇಯರೆಡ್ಡಿ ನ್ಯಾಯಾಲಯದ ಮೊರೆ ಹೋದರು. ಈ ಭಾಗದ ಜನರು ವಿವಿಧ ರೀತಿಯಲ್ಲಿ ಹೋರಾಟ, ಪ್ರತಿಭಟನೆ, ಪಾದಯಾತ್ರೆ ನಡೆಸುತ್ತಲೇ ಬಂದಿದ್ದಾರೆ. ಆದರೆ, ಇವರ ಕೂಗು ಇಂದಿಗೂ ಸರ್ಕಾರಕ್ಕೆ ಕೇಳಿಸಿಲ್ಲ.

ಅತ್ತ 24 ಸಾವಿರ ಕೋಟಿಯ ಎತ್ತಿನಹೊಳೆ ಯೋಜನೆ, ಇತ್ತ 6 ಸಾವಿರ ಕೋಟಿಯ ತ್ಯಾಜ್ಯ ಸಂಸ್ಕರಿತ ನೀರಿನ ವ್ಯಾಲಿ ಯೋಜನೆ- ಎರಡರಿಂದಲೂ ಈ ಭಾಗದ ಜನರ ನೀರಿನ ಬವಣೆ ನೀಗಿಲ್ಲ. ಯೋಜನೆ ಆರಂಭಿಸುವಾಗ ಈ ಭಾಗದ ಜನರಲ್ಲಿದ್ದ ಆತಂಕ ಈಗ ದೃಢಪಟ್ಟಿದೆ. ಸರ್ಕಾರ ತನ್ನ ವೈಫಲ್ಯ ಮುಚ್ಚಿಕೊಳ್ಳಲು ಸುಳ್ಳುಗಳ ಮೇಲೆ ಸುಳ್ಳು ಹೇಳಿ ಜನರನ್ನು ವಂಚಿಸಿದೆ. ಸಾರ್ವಜನಿಕರ ತೆರಿಗೆ ಹಣವನ್ನು ಪೋಲು ಮಾಡಿದೆ.

ಎರಡೂ ಯೋಜನೆಗಳ ಹೊಣೆ ಹೊರುವವರು ಯಾರು? ಈ ಕುರಿತು ತನಿಖೆಯಾಗಲಿ, ತಪ್ಪಿತಸ್ಥರಿಗೆ ಶಿಕ್ಷೆಯಾಗಲಿ ಎನ್ನುವುದು ಜಲಾಗ್ರಹ ಹೋರಾಟಗಾರರ ಒಕ್ಕೊರಲಿನ ಆಗ್ರಹವಾಗಿದೆ. ಹಾಗೆಯೇ ಬಹುದಿನಗಳ ಕೃಷ್ಣಾ ನದಿಯ ನಮ್ಮ ಪಾಲಿನ ನೀರನ್ನು ಕೃಷ್ಣಾ-ಪೆನ್ನಾರ್ ಜೋಡಿಸುವ ಮೂಲಕ ಬರಪೀಡಿತ ಜಿಲ್ಲೆಗಳ ನೀರಿನ ಬವಣೆಯನ್ನು ಶಾಶ್ವತವಾಗಿ ಪರಿಹರಿಸಬಹುದೆಂಬ ಸಲಹೆಯನ್ನೂ ನೀಡಿದೆ. ಈ ಸಲಹೆ-ಆಗ್ರಹ ನ್ಯಾಯಯುತವಾಗಿದೆ. ನಾಡಿನ ಜನತೆ ಈ ಹೋರಾಟದ ಬೆನ್ನಿಗೆ ನಿಂತು ಬೆಂಬಲಿಸಬೇಕಾಗಿದೆ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ರಾಜ್ಯದಲ್ಲಿ 'ಅಂಬೇಡ್ಕರ್ ನಗರೋದ್ಯೋಗ ಖಾತ್ರಿ ಯೋಜನೆ' ಜಾರಿಯಾಗಲಿ



ಗ್ರಾಮೀಣ ಭಾಗದ ಜನರಿಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ () ಇರುವಂತೆ, ನಗರದ ಬಡವರಿಗೂ ಬದುಕುವ ಹಕ್ಕನ್ನು ಖಾತರಿಪಡಿಸಲು ಅಂಬೇಡ್ಕರ್ ನಗರೋದ್ಯೋಗ ಖಾತ್ರಿ ಯೋಜನೆ ಜಾರಿಯಾಗುವುದು ಇಂದಿನ ತುರ್ತು ಅವಶ್ಯಕತೆಯಾಗಿದೆ.

ಭಾರತದ ಆರ್ಥಿಕತೆಯ ಎಂಜಿನ್ ಎಂದು ಕರೆಯಲ್ಪಡುವ ನಗರಗಳು ದೂರದಿಂದ ನೋಡಲು ಬೆಳೆಯುತ್ತಿರುವ ಕಟ್ಟಡಗಳು, ಹಾರಾಡುವ ಮೆಟ್ರೋ ರೈಲುಗಳು ಮತ್ತು ಐಷಾರಾಮಿ ಮಾಲ್‌ಗಳಂತೆ ಕಾಣುತ್ತವೆ. ಆದರೆ, ಈ ಐಸಿರಿ ಮತ್ತು ವೈಭವದ ಹಿಂದಿನ ಕಟುಸತ್ಯವೆಂದರೆ, ಈ ನಗರಗಳನ್ನು ಕಟ್ಟಿದ ಕಾರ್ಮಿಕರ ಬದುಕು ಇಂದಿಗೂ ಕತ್ತಲೆಯಲ್ಲಿದೆ. ಹಳ್ಳಿಗಳಲ್ಲಿ ಉದ್ಯೋಗವಿಲ್ಲದೆ, ಕೃಷಿ ಮಾಡಲಾಗದೆ ಗುಳೆ ಬಂದ ಲಕ್ಷಾಂತರ ಜನರು ನಗರದ ಕೊಳೆಗೇರಿಗಳಲ್ಲಿ ಉಸಿರುಗಟ್ಟುವ ವಾತಾವರಣದಲ್ಲಿ ಬದುಕುತ್ತಿದ್ದಾರೆ.

ಗ್ರಾಮೀಣ ಭಾಗದ ಜನರಿಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ () ಇರುವಂತೆ, ನಗರದ ಬಡವರಿಗೂ ಬದುಕುವ ಹಕ್ಕನ್ನು ಖಾತರಿಪಡಿಸಲು ''ಅಂಬೇಡ್ಕರ್ ನಗರೋದ್ಯೋಗ ಖಾತ್ರಿ ಯೋಜನೆ'' ಜಾರಿಯಾಗುವುದು ಇಂದಿನ ತುರ್ತು ಅವಶ್ಯಕತೆಯಾಗಿದೆ.

ನಾವು ಗಮನಿಸಬೇಕಾದ ಪ್ರಮುಖ ವಿಷಯವೆಂದರೆ ಗ್ರಾಮೀಣ ಬಡತನಕ್ಕೂ ಮತ್ತು ನಗರದ ಬಡತನಕ್ಕೂ ಇರುವ ವ್ಯತ್ಯಾಸ. ಹಳ್ಳಿಯಲ್ಲಿ ಬಡವನಾದರೂ ಕನಿಷ್ಠ ತಲೆಯೆತ್ತಿ ಮಲಗಲು ಸ್ವಂತ ಸೂರಿರುತ್ತದೆ, ಕುಡಿಯಲು ನೀರು ಸಿಗುತ್ತದೆ ಮತ್ತು ನೆರೆಹೊರೆಯವರ ಬೆಂಬಲವಿರುತ್ತದೆ. ಆದರೆ ನಗರಕ್ಕೆ ವಲಸೆ ಬಂದ ಬಡವನ ಸ್ಥಿತಿ ಹಾಗಿಲ್ಲ. ಇಲ್ಲಿ ಕುಡಿಯುವ ನೀರಿನಿಂದ ಹಿಡಿದು, ಬಳಸುವ ಶೌಚಾಲಯದವರೆಗೂ ಪ್ರತಿಯೊಂದಕ್ಕೂ ಹಣ ತೆರಲೇಬೇಕು. ಒಂದು ದಿನ ಕೆಲಸ ಸಿಗದಿದ್ದರೆ ಆ ಕುಟುಂಬ ಅಂದು ಉಪವಾಸ ಮಲಗಬೇಕಾಗುತ್ತದೆ. ಕೋವಿಡ್ ಸಾಂಕ್ರಾಮಿಕದ ಸಮಯದಲ್ಲಿ ನಾವು ನೋಡಿದ ದೃಶ್ಯಗಳು ಇದಕ್ಕೆ ಸಾಕ್ಷಿ.

ಲಾಕ್‌ಡೌನ್ ಆದಾಗ ಕೆಲಸ ಕಳೆದುಕೊಂಡ ಲಕ್ಷಾಂತರ ಕಾರ್ಮಿಕರು ನೂರಾರು ಕಿಲೋಮೀಟರ್ ನಡೆದುಕೊಂಡು ಹಳ್ಳಿಗೆ ಹೋಗಿದ್ದು ಇದೇ ಆರ್ಥಿಕ ಅಭದ್ರತೆಯ ಕಾರಣದಿಂದ. ಇಂತಹ ದುರಂತಗಳು ಮರುಕಳಿಸದಂತೆ ತಡೆಯಲು, ''ನಗರದಲ್ಲಿ ವಾಸಿಸುವ ಪ್ರತಿಯೊಂದು ಬಡ ಕುಟುಂಬಕ್ಕೂ ವರ್ಷದಲ್ಲಿ ಕನಿಷ್ಠ 100ರಿಂದ 150 ದಿನಗಳ ಉದ್ಯೋಗವನ್ನು ಸರ್ಕಾರವೇ ಒದಗಿಸಬೇಕು'' ಎನ್ನುವ ಯೋಜನೆ ಅತ್ಯಗತ್ಯ.

ಈ ಯೋಜನೆಯು ಕೇವಲ ಬಡವರಿಗೆ ಹಣ ಕೊಡುವ ಯೋಜನೆಯಲ್ಲ, ಬದಲಾಗಿ ನಗರಗಳ ಅಂದವನ್ನು ಮತ್ತು ಆರೋಗ್ಯವನ್ನು ಕಾಪಾಡುವ ಮಹಾನ್ ಯೋಜನೆಯಾಗಿ ರೂಪುಗೊಳ್ಳಬಲ್ಲದು. ನಗರದ ಚರಂಡಿಗಳ ಹೂಳು ತೆಗೆಯುವುದು, ಉದ್ಯಾನವನಗಳ ನಿರ್ವಹಣೆ, ರಸ್ತೆ ಬದಿಯ ಗಿಡಗಳನ್ನು ಪೋಷಿಸುವುದು, ಕೆರೆಗಳ ಪುನರುಜ್ಜೀವನ ಮತ್ತು ತ್ಯಾಜ್ಯ ನಿರ್ವಹಣೆಯಂತಹ ಕೆಲಸಗಳಲ್ಲಿ ಈ ಮಾನವ ಸಂಪನ್ಮೂಲವನ್ನು ಬಳಸಿಕೊಳ್ಳಬಹುದು. ಇದರಿಂದ ನಗರವೂ ಸ್ವಚ್ಛವಾಗುತ್ತದೆ, ಬಡವರ ಕೈಗೆ ಹಣವೂ ಸಿಗುತ್ತದೆ. ಆರ್ಥಿಕ ಪರಿಭಾಷೆಯಲ್ಲಿ ಹೇಳುವುದಾದರೆ, ಯಾವಾಗ ಬಡವರ ಕೈಗೆ ಹಣ ಸೇರುತ್ತದೆಯೋ, ಆಗ ಅವರು ಮಾರುಕಟ್ಟೆಯಲ್ಲಿ ಅಗತ್ಯ ವಸ್ತುಗಳನ್ನು ಖರೀದಿಸುತ್ತಾರೆ. ಇದರಿಂದ ಬೇಡಿಕೆ ಹೆಚ್ಚಾಗಿ, ಸ್ಥಳೀಯ ಆರ್ಥಿಕತೆಗೆ ದೊಡ್ಡ ಉತ್ತೇಜನ ಸಿಗುತ್ತದೆ.

ಈಗಾಗಲೇ ಕೇರಳ ರಾಜ್ಯದಲ್ಲಿ ಅಯ್ಯಂಕಾಳಿ ನಗರ ಉದ್ಯೋಗ ಖಾತ್ರಿ ಯೋಜನೆ ಮತ್ತು ರಾಜಸ್ಥಾನದಲ್ಲಿ ಇಂದಿರಾ ಗಾಂಧಿ ಶಹರಿ ರೋಜ್‌ಗಾರ್ ಯೋಜನೆಗಳು ಜಾರಿಗೆ ಬಂದು ಯಶಸ್ವಿಯಾಗಿವೆ. ಒಡಿಶಾ ಮತ್ತು ಹಿಮಾಚಲ ಪ್ರದೇಶಗಳೂ ಈ ದಿಕ್ಕಿನಲ್ಲಿ ಹೆಜ್ಜೆ ಇಟ್ಟಿವೆ. ಸಂಪದ್ಭರಿತ ರಾಜ್ಯವಾದ ಕರ್ನಾಟಕದಲ್ಲಿ ಈ ಯೋಜನೆ ಯಾಕೆ ಬರಬಾರದು? ಬೆಂಗಳೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡದಂತಹ ನಗರಗಳಲ್ಲಿ ದಿನಗೂಲಿ ನೌಕರರು ಕೆಲಸಕ್ಕಾಗಿ ಬೆಳಿಗ್ಗೆ ವೃತ್ತಗಳಲ್ಲಿ ಕಾದು ನಿಲ್ಲುವ ದೃಶ್ಯ ಸಾಮಾನ್ಯವಾಗಿದೆ. ಈ ಕಾಯ್ದೆ ಜಾರಿಯಾದರೆ, ಅವರು ದಲ್ಲಾಳಿಗಳ ಹಂಗಿಲ್ಲದೆ, ಸರ್ಕಾರ ನೀಡುವ ಜಾಬ್ ಕಾರ್ಡ್ ಮೂಲಕ ಗೌರವಯುತವಾಗಿ ಕೆಲಸ ಪಡೆಯಬಹುದು. ಕನಿಷ್ಠ ವೇತನ ಯೋಜನೆಯಡಿ ನಿಗದಿಪಡಿಸಿದ ಕೂಲಿಯನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗೆ ಜಮೆ ಮಾಡುವುದರಿಂದ ಮಧ್ಯವರ್ತಿಗಳ ಹಾವಳಿ ತಪ್ಪುತ್ತದೆ.

ಅಷ್ಟೇ ಅಲ್ಲದೆ, ಈ ಯೋಜನೆಯು ಮಹಿಳಾ ಸಬಲೀಕರಣಕ್ಕೂ ದೊಡ್ಡ ಅಸ್ತ್ರವಾಗಬಲ್ಲದು. ನಗರದಲ್ಲಿನ ಅಸುರಕ್ಷಿತ ವಾತಾವರಣದಲ್ಲಿ ಮಹಿಳೆಯರು ಕೆಲಸಕ್ಕೆ ಹೋಗಲು ಹಿಂಜರಿಯುತ್ತಾರೆ. ಆದರೆ ಸರ್ಕಾರವೇ ತಮ್ಮ ಬಡಾವಣೆಯ ಹತ್ತಿರ, ಹಗಲು ಹೊತ್ತಿನಲ್ಲಿ ಕೆಲಸ ನೀಡುವ ಭರವಸೆ ನೀಡಿದರೆ, ಲಕ್ಷಾಂತರ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾಗುತ್ತಾರೆ. ಇದು ಅವರ ಕುಟುಂಬದ ಪೋಷಣೆಗೆ ಮತ್ತು ಮಕ್ಕಳ ಶಿಕ್ಷಣಕ್ಕೆ ದಾರಿ ಮಾಡಿಕೊಡುತ್ತದೆ. ಸಾಮಾಜಿಕ ನ್ಯಾಯದ ದೃಷ್ಟಿಯಿಂದ ನೋಡಿದರೆ, ನಗರದ ಸ್ಲಮ್‌ಗಳಲ್ಲಿ ವಾಸಿಸುವವರಲ್ಲಿ ಬಹುಪಾಲು ದಲಿತರು, ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗದವರೇ ಆಗಿದ್ದಾರೆ. ಅವರಿಗೆ ಆರ್ಥಿಕ ಭದ್ರತೆ ಒದಗಿಸುವುದು ಎಂದರೆ ಸಂವಿಧಾನದ ಆಶಯವನ್ನು ಎತ್ತಿ ಹಿಡಿದಂತೆ.

ನಗರೀಕರಣ ಎಂಬುದು ತಡೆಯಲಾಗದ ಪ್ರವಾಹ. ಹಳ್ಳಿಗಳಿಂದ ಜನರು ನಗರಕ್ಕೆ ಬರುವುದು ಮುಂದುವರಿಯುತ್ತಲೇ ಇರುತ್ತದೆ. ಅವರನ್ನು ಕೇವಲ ಅಗ್ಗದ ಕೂಲಿ ಕಾರ್ಮಿಕರಂತೆ ನೋಡುವುದನ್ನು ಬಿಟ್ಟು, ಅವರೂ ನಮ್ಮಂತೆಯೇ ಮನುಷ್ಯರು, ಅವರಿಗೂ ಬದುಕುವ ಹಕ್ಕಿದೆ ಎಂಬುದನ್ನು ಸರ್ಕಾರ ಮನಗಾಣಬೇಕು. ಬೃಹತ್ ಕಟ್ಟಡಗಳನ್ನು ಕಟ್ಟುವ ಕಾರ್ಮಿಕನಿಗೆ ಆ ಕಟ್ಟಡದ ನೆರಳಲ್ಲಿ ನಿಲ್ಲುವ ಹಕ್ಕಿಲ್ಲದಂತಹ ವ್ಯವಸ್ಥೆ ಬದಲಾಗಬೇಕು. ''ಕೆಲಸ ಕೇಳುವುದು ಭಿಕ್ಷೆಯಲ್ಲ, ಅದು ಹಕ್ಕು'' ಎಂದು ಸಾರುವ ನಗರೋದ್ಯೋಗ ಖಾತ್ರಿ ಯೋಜನೆಯು ಸಮತೆಯ ಭಾರತದ ನಿರ್ಮಾಣಕ್ಕೆ ಬಲವಾದ ಬುನಾದಿಯಾಗಬಲ್ಲದು. ಹಸಿವು ಮುಕ್ತ ನಗರಗಳ ನಿರ್ಮಾಣಕ್ಕೆ ಇದು ಏಕೈಕ ರಾಜಮಾರ್ಗ.



ಕುರ್ಡಿ ನಾಡ ಕಾರ್ಯಾಲಯದಲ್ಲಿ ಸಿದ್ದರಾಮೇಶ್ವರ ಜಯಂತಿ ಆಚರಣೆ

ಮಾನ್ವಿ,ಜ.17-

ಕುರ್ಡಿ ನಾಡ ಕಾರ್ಯಾಲಯದಲ್ಲಿ ಮಹಾನ್ ದಾರ್ಶನಿಕ, 12ನೇ ಶತಮಾನದ ಪ್ರಮುಖ ವಚನಕಾರ ಕಾಯಕಯೋಗಿ, ಕರ್ಮಯೋಗಿ, ಶಿವಯೋಗಿ, ಪರಮಪೂಜ್ಯ ಶ್ರೀ ಸಿದ್ದರಾಮೇಶ್ವರ ರವರ 854ನೇ ಜಯಂತಿಯನ್ನು ಪರಮ ಪೂಜ್ಯರ ಭಾವಚಿತ್ರಕ್ಕೆ ನಾಡ ತಹಸೀಲ್ದಾರರಾದ ಎಂ. ಬಿ ರಾಮುಲುವರು ಮಾಲಾರ್ಪಣೆ ಮಾಡುವುದರ ಮೂಲಕ ಆಚರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳಾದ ಅಮರೇಶ್ ,ಗ್ರಾಮದ ಮುಖಂಡರಾದ, ಲಕ್ಷ್ಮಣ ನಾಯಕ, ಪ್ರಭಾಜನ್ ರಾವ್, ರಿಜ್ವಾನ್, ಈರಣ್ಣಕುರ್ಡಿ, ಮೆಹಬೂಬ್, ನಾಡ ಕಾರ್ಯಲಯದ ಸಿಬ್ಬಂದಿಗಳಾದ ಮಹಮ್ಮದ್ ರೆಹಮತುಲ್ಲಾ, ಆನಂದ, ಸಿದ್ದಪ್ಪ ಹಾಗೂ, ಸಾರ್ವಜನಿಕರು ಉಪಸ್ಥಿರಿದ್ದರು.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ: ಜ. 21 ಮತ್ತು 22ಕ್ಕೆ ಸರ್ಕಾರಿ ನೌಕರರ ಕ್ರೀಡಾಕೂಟ

ಕಲಬುರಗಿ,ಜ.17-

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಕಲಬುರಗಿ ಜಿಲ್ಲಾ ಘಟಕ ಸಂಯುಕ್ತಾಶ್ರಯದಲ್ಲಿ ಇದೇ ಜನವರಿ 21 ಮತ್ತು 22 ರಂದು ರಾಜ್ಯ ಸರ್ಕಾರಿ ನೌಕರರಿಗಾಗಿ 2025-26ನೇ ಸಾಲಿನ ಜಿಲ್ಲಾ ಮಟ್ಟದ ವಾರ್ಷಿಕ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳು ಆಯೋಜನೆಗೆ ಶುಕ್ರವಾರ ಜರುಗಿದ ಸಭೆಯಲ್ಲಿ ನಿರ್ಧರಿಸಲಾಗಿದೆ.

ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕ್ರೀಡಾಕೂಟ ಸಂಬಂಧ ಜರುಗಿದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು, ಜಿಲ್ಲೆಯ ಎಲ್ಲಾ ಸರ್ಕಾರಿ ನೌಕರರು ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಮತ್ತು ಇದಕ್ಕಾಗಿ ಕೂಡಲೆ ಹೆಸರು ನೊಂದಣಿ ಮಾಡಿಕೊಳ್ಳಬೇಕೆಂದ ಅವರು, ಈ ಕುರಿತು ಎಲ್ಲಾ ಇಲಾಖೆಯ ಸೂಚನಾ ಫಲಕದಲ್ಲಿ ಕ್ರೀಡಾಕೂಟದ ಬಗ್ಗೆ ಪೋಸ್ಟರ್ ಅಂಟಿಸಿ ಪ್ರಚಾರ ಮಾಡಬೇಕು ಎಂದು ನೌಕರರ ಸಂಘದ ಪದಾಧಿಕಾರಿಗಳಿಗೆ ತಿಳಿಸಿದರು.

ಜನವರಿ 21 ರಂದು ಚಂದ್ರಶೇಖರ್ ಪಾಟೀಲ ಕ್ರೀಡಾಂಗಣದಲ್ಲಿ ಎಲ್ಲಾ ಮಾದರಿಯ ಕ್ರೀಡೆಗಳು ಜರುಗಲಿವೆ. ಅದೇ ರೀತಿ ಜನವರಿ 22 ರಂದು ನಗರದ ಕನ್ನಡ ಭವನದಲ್ಲಿ ಸಾಂಸ್ಕೃತಿಕ ಸ್ಪರ್ಧೆ ಆಯೋಜನೆ ಮಾಡಿದ್ದು, ನೌಕರರು ದೈನಂದಿದ ಕೆಲಸದ ಒತ್ತಡದಿಂದ ಹೊರಬರಲು ಇದೊಂದು ಉತ್ತಮ ಅವಕಾಶವಾಗಿದ್ದು, ಕ್ರೀಡೆ ಮತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಭಾಗವಹಿಸಬೇಕು. ಕ್ರೀಡಾಕೂಟದಲ್ಲಿ ಭಾಗವಹಿಸುವ ನೌಕರರಿಗೆ ಓ.ಓ.ಡಿ ಸೌಲಭ್ಯ ಕಲ್ಪಿಸಲಾಗುವುದು ಎಂದು ಡಿ.ಸಿ. ತಿಳಿಸಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಸಂಗಮೇಶ ಅವರು ಕ್ರೀಡಾಕೂಟಕ್ಕೆ ಇದೂವರೆಗೆ ತೆಗೆದುಕೊಂಡ ಪೂರ್ವಸಿದ್ಧತೆ ಕ್ರಮಗಳು ಮತ್ತು ವಿವಿಧ ಸ್ಪರ್ಧೆಗಳ ಕುರಿತು ಸಭೆಗೆ ಮಾಹಿತಿ ನೀಡಿದರು.

ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳೂಂಡಗಿ ಮಾತನಾಡಿ, ಎರಡು ದಿನಗಳ ಕ್ರೀಡಾಕೂಟದಲ್ಲಿ ವಿಶೇಷಚೇನತರಿಗೂ ಅವಕಾಶ ಕಲ್ಪಿಸಿದೆ. ಕ್ರೀಡಾಕೂಟದಲ್ಲಿ ಭಾಗವಹಿಸುವ ನೌಕರರಿಗೆ ಓ.ಓ.ಡಿ ಸೌಲಭ್ಯ ಮಂಜೂರು ಮಾಡಬೇಕು ಮತ್ತು ಕ್ರೀಡಾಕೂಟ ಯಶಸ್ಸಿಗೆ ಜಿಲ್ಲಾಡಳಿತ ಅಗತ್ಯ ಸಹಕಾರ ನೀಡುವಂತೆ ಡಿ.ಸಿ. ಅವರಿಗೆ ಮನವಿ ಮಾಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಹೆಚ್ಚುವರಿ ಎಸ್.ಪಿ. ಮಹೇಶ ಮೇಘಣ್ಣನವರ್, ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ, ಮಹಾನಗರ ಪಾಲಿಕೆ ಉಪ ಆಯುಕ್ತೆ (ಆಡಳಿತ) ಪ್ರಮೀಳಾ ಎಂ.ಕೆ. ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಭಾಗವಹಿಸಿದ್ದರು.

ಶಾಂತಿನಿಕೇತನ ಚಾಂಪಿಯನ್ ಪಬ್ಲಿಕ್ ಶಾಲೆಯಲ್ಲಿ ಸಂಕ್ರಾಂತಿ ಸಂಭ್ರಮ



ಸಿಂಧನೂರು,ಜ.17-

ತಾಲ್ಲೂಕಿನದೇವಿ ಕ್ಯಾಂಪ್ ಶಾಂತಿನಿಕೇತನ ಚಾಂಪಿಯನ್ ಪಬ್ಲಿಕ್ ಶಾಲೆಯಲ್ಲಿ ಸಂಕ್ರಾಂತಿ ಸಂಭ್ರಮವನ್ನು ಆಯೋಜಿಸಲಾಗಿತ್ತು.

ಸಂಕ್ರಾಂತಿ ಸಂಭ್ರಮ ಸುಗ್ಗಿ ಹಬ್ಬ ಬಣ್ಣ ಬಣ್ಣದ ರಂಗೋಲಿ ಹಾಕಿ ತಳಿರು ತೋರಣಗಳಿಂದ ಅಲಂಕಾರ ಮಾಡಲಾಗಿತ್ತು. ಶಾಲೆಯ ವಿದ್ಯಾರ್ಥಿಗಳು ಗ್ರಾಮೀಣ ಸೊಗಡಿನ ಸಂಕ್ರಾಂತಿ ಹಬ್ಬದ ಸಂಸ್ಕೃತಿ ಬಿಂಬಿಸುವ ಮೂಲಕ ಕಾರ್ಯಕ್ರಮಕ್ಕೆ ಮೆರುಗು ನೀಡಿದರು.

ಹಸಿವಿಗೆ ಹಾಗೂ ರೈತನ ಕಾಳಿನ ರಾಶಿಗೆ ಪೂಜೆ ನೆರವೇರಿಸುವ ಮೂಲಕ ಸಂಕ್ರಾಂತಿ ಭೋಗಿ ಹಬ್ಬಕ್ಕೆ ಶಾಲೆಯ ಮುಖಗುರು ಪ್ರಭಾವತಿ ಚಾಲನೆ ನೀಡಿ ಮಾತನಾಡಿದ ಅವರು ಹಬ್ಬ-ಹರಿದಿನಗಳ ಆಚರಣೆಯಿಂದ ಮಕ್ಕಳಿಗೆ ನಮ್ಮ ದೇಶದ ಸಂಸಕೃತಿಯ ಪರಿಚಯವಾಗುತ್ತದೆ ಹಾಗೂ ದೇಶದ ವಿವಿಧ ಭಾಗಗಳಲ್ಲಿ ಹಬ್ಬಗಳನ್ನು ಯಾವ ರೀತಿ ಆಯೋಜಿಸಲಾಗುತ್ತದೆ ಮತ್ತು ಅದರ ಮಹತ್ವ ಅವರಿಗೆ ತಿಳಿಯುತ್ತದೆ. ಅಷ್ಟೆ ಅಲ್ಲದೇ ಮಕ್ಕಳಲ್ಲಿ ಇದು ಸೌಹಾರ್ದಯುತ ಭಾವನೆ ಬೆಳೆಯಲು ಸಹಕಾರಿಯಾಗುತ್ತದೆ. ಸಂಕ್ರಾಂತಿ ಉತ್ತರಾಯಣದ ಪ್ರಾರಂಭಕಾಲವಾಗಿದ್ದು, ಸುಗ್ಗಿಯ ಹಬ್ಬವಾಗಿದೆ. ಈ ಹಬ್ಬದಲ್ಲಿ ಪುಣ್ಯಸ್ನಾನ, ಎಳ್ಳು-ಬೆಲ್ಲವನ್ನು ಹಂಚುವ ಮೂಲಕ ದ್ವೇಷ ಮರೆತು ಎಲ್ಲರು ಒಂದಾಗಿ ಆಚರಿಸುವ ಹಬ್ಬ ಇದಾಗಿದೆ ಎಂದು ತಿಳಿಸಿದರು.

ಶಾಲಾ ವಿದ್ಯಾರ್ಥಿಗಳು ,ಪೋಷಕರು ಈ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

ಪುರಸಭೆಯ ಅಧ್ಯಕ್ಷರಾಗಿ ಮಂಜುನಾಥ ಮೇಗೂರ ಹಾಗೂ ಉಪಾಧ್ಯಕ್ಷರಾಗಿ ಸುಜಾತ ಆಯ್ಕೆ



ಕೊಪ್ಪಳ.ಜ.17-

ಜಿಲ್ಲೆಯ ಕಾರಟಗಿಯ. ಪುರಸಭೆಯ. ಅಧ್ಯಕ್ಷರಾಗಿ ಶ್ರೀ ಮಂಜುನಾಥ ಮೇಗೂರ ಹಾಗೂ ಉಪಾಧ್ಯಕ್ಷರಾಗಿ ಶ್ರೀಮತಿ ಸುಜಾತ. ಆಯ್ಕೆಯಾಗಿದ್ದಾರೆ. ಇಂದು ಕಾರಟಗಿ ಪುರಸಭೆ ಅಧ್ಯಕ್ಷರಾಗಿ. ಆಯ್ಕೆಯಾದ. ಮಂಜುನಾಥ್ ಮೇಗೂರ್. ಉಪಾಧ್ಯಕ್ಷರಾಗಿ ಆಯ್ಕೆಯಾದ. ಶ್ರೀಮತಿ ಸುಜಾತ. ಅವರಿಗೆ ಇಂದು ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶಿವರಾಜ್ ಎಸ್. ತಂಗಡಗಿ. ಅವರೊಂದಿಗೆ ಕೊಪ್ಪಳ ಲೋಕಸಭಾ ಸದಸ್ಯರಾದ. ಶ್ರೀ ಬಸವರಾಜ್ ಹಿಟ್ನಾಳ್. ಅವರು. ನೂತನ ಅಧ್ಯಕ್ಷ ಹಾಗೂ ಉಪಾಧ್ಯಕ್ಷರಿಗೆ ಅಭಿನಂದಿಸಿ ಗೌರವ ಸಲ್ಲಿಸಿದರು. ಹಾಗೂ ಕಾರಟಗಿಯ ಸಮಗ್ರ ಅಭಿವೃದ್ಧಿ ಮತ್ತು ನಿಮ್ಮ ನಾಯಕತ್ವ ಮಹತ್ವದ ಕೊಡುಗೆ ನೀಡಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಕಾರಟಗಿ ಪುರಸಭೆಯ ಸದಸ್ಯರು ಹಾಗೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR